MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 313 | ಬುಧವಾರ : 01-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 313 | WEDNESDAY : 01-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಮಾನ್ವಿ: ಮಳೆಗೆ ಬೆಳೆ ಹಾನಿ ಪರಿಹಾರಕ್ಕಾಗಿ ಜೆಡಿಎಸ್ ಪಕ್ಷದಿಂದ ಮನವಿ




ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.30–** ತಾಲೂಕಿನ ರೈತರು ಕಳೆದ ಮೂರು ತಿಂಗಳುಗಳಿಂದ ಹೆಚ್ಚುವರಿ ಮುಂಗಾರು ಮಳೆಯಿಂದಾಗಿ ಹತ್ತಿ, ಜೋಳ ಮತ್ತು ತೊಗರಿ ಬೆಳೆ ಸಂಪೂರ್ಣ ಹಾನಿಯಾಗಿದ್ದು ತಕ್ಷಣ ಸೂಕ್ತ ಪರಿಹಾರ ನೀಡಬೇಕೆಂದು ಎಂದು ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಆಗ್ರಹಿಸಿದರು.

ಮಂಗಳವಾರ ತಹಶೀಲ್ದಾರ್ ಕಚೇರಿಯಲ್ಲಿ ಗ್ರೇಡ್ 2 ತಹಸೀಲ್ದಾರ್ ಅಬ್ದುಲ್ ವಾಹಿದ್ ರವರ ಮುಖಾಂತರ, ರಾಜ್ಯದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ ಮಾತನಾಡಿ, ದುಬಾರಿ ಬಿತ್ತನೆಗಳು ಯಾವು ದೇ ಪರಿಹಾರವಿಲ್ಲದೆ ನಷ್ಟವಾಗುತ್ತಿರುವುದು ತೀವ್ರ ಸಂಕಷ್ಟದ ಪರಿಸ್ಥಿತಿಯಾಗಿದೆ. ರಾಜ್ಯ ಸರ್ಕಾರದ ಗಮನಕ್ಕೆ ಈ ವಿಷಯ ತಲುಪಿಸಿ ತ್ವರಿತ ಪರಿಹಾರವನ್ನು ಒದಗಿಸಲು ನಾವು ಮನವಿ ಮಾಡುತ್ತಿದ್ದೇವೆ" ಎಂದು ಹೇಳಿದರು.

ಹತ್ತಿ 25,477 ಹೆಕ್ಟೇರ್, ಜೋಳ 22,863 ಹೆಕ್ಟೇರ್ ಮತ್ತು ತೊಗರಿ 725 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿ ಸಂಭವಿಸಿರುವುದು, ರೈತರು ಮಾಡಿದ ದುಬಾರಿ ಬಿತ್ತನೆಗಳು ಹಾನಿಯಾಗಿರುವುದು ಹಾಗೂ ಸೂಕ್ತ ಪರಿಹಾರ ಒದಗಿಸಬೇಕು, ಪತ್ರದಲ್ಲಿ ರೈತರಿಗೆ ಹತ್ತಿಗೆ ಪ್ರತಿ ಎಕರೆಗೆ ರೂ 35,000, ಮುಂಗಾರು ಜೋಳ (ಹೈಬ್ರಿಡ್)ಗೆ ರೂ 30,000 ಮತ್ತು ತೊಗರಿಗೆ ರೂ 30,000 ಪರಿಹಾರ ನೀಡಬೇಕು, ರೈತರ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು ಎಂದು ಮನವಿಯಲ್ಲಿ ಒತ್ತಾಯಿದರು.

ಈ ಸಂದರ್ಭದಲ್ಲಿ, ಜೆ.ಡಿ.ಎಸ್. ಮಾನ್ವಿ ತಾಲೂಕು ಅಧ್ಯಕ್ಷ ಈರಣ್ಣ ಮರ್ಲಟ್ಟಿ ಪೋತ್ನಾಳ, ಸಿರವಾರ ತಾಲೂಕು ಅಧ್ಯಕ್ಷ ಟಿ.ಮಲ್ಲಿಕಾರ್ಜುನ ಪಾಟೀಲ್ ಬಲ್ಲಟಗಿ, ಪಂಚಾಯತ್ ವಿರೋಧ ಪಕ್ಷದ ನಾಯಕ ರಾಜಾ ಮಹೇಂದ್ರ ನಾಯಕ, ಜೆ.ಡಿ.ಎಸ್ ಯುವ ಘಟಕದ ರಾಜ್ಯ ಉಪಾಧ್ಯಕ್ಷ ರಾಜಾ ರಾಮಚಂದ್ರ ನಾಯಕ, ರೈತ ಘಟಕದ ಅಧ್ಯಕ್ಷ ಶರಣಪ್ಪ ಗೌಡ ಮದ್ಲಾಪೂರ, ಪಕ್ಷದ ವಕ್ತಾರ ನಾಗರಾಜ ಭೋಗಾವತಿ, ನಗರ ಘಟಕದ ಅಧ್ಯಕ್ಷ ಹೆಚ್.ಮೌನೇಶಗೌಡ, ತಾ. ಉಪಾಧ್ಯಕ್ಷ ಶಶಿಧರ್ ಗೌಡ ನೀರಮಾನ್ವಿ, ಶಂಕರಗೌಡ ಸಂಗಪೂರ, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಬಾಷಾ ಸಾಬ್, ಹಿಂ.ದು ವಿಭಾಗದ ಘಟಕದ ಅಧ್ಯಕ್ಷ ಲಕ್ಷ್ಮಣ್ ಯಾದವ್, ಎಸ್.ಟಿ ಘಟಕದ ಅಧ್ಯಕ್ಷ ವಿಜಯ್ ನಾಯಕ, ನಗರ ಯುವ ಘಟಕದ ಅಧ್ಯಕ್ಷ ಎಂ.ಡಿ. ಉಸ್ಮಾನ್, ಪುರಸಭೆ ಸದಸ್ಯ ಶರಣಪ್ಪ ಮೇದಾ, ಮುಖಂಡರಾದ ಮಲ್ಲಪ್ಪ ಹೂಗಾರ, ಜುಲ್ಪಿ ಹಳ್ಳಪ್ಪ ನಾಯಕ, ಶ್ರೀಧರ್ ಸ್ವಾಮಿ, ಸುಭಾನ್ ಬೇಗ್, ಸುಗೂರಯ್ಯ ಸ್ವಾಮಿ, ಮೌನೇಶ ನಾಯಕ, ಬಸವನಗೌಡ ಉಟಕನೂರು, ಖಾಸಿಂ ಚೀಕಲಪರ್ವಿ, ನುಸ್ರತ್, ಯಲ್ಲಪ್ಪ ನಾಯಕ, ವೀರೇಶ್ ವಿಶ್ವಕರ್ಮ ಸೇರಿದಂತೆ ಆನೇಕರು ಉಪಸ್ಥಿತರಿದ್ದರು.

## ದೆಹಲಿ ಬಿಜೆಪಿ ಮೊದಲ ಅಧ್ಯಕ್ಷ ಮಲ್ಹೋತ್ರ ನಿಧನ



**ನವದೆಹಲಿ,ಸೆ.30–**ಹಿರಿಯ ಭಾರತೀಯ ಜನತಾ ಪಕ್ಷದ ನಾಯಕ ಮತ್ತು ದೆಹಲಿ ಬಿಜೆಪಿಯ ಮೊದಲ ಅಧ್ಯಕ್ಷ ಪ್ರೊ. ವಿಜಯ್ ಕುಮಾರ್ ಮಲ್ಹೋತ್ರಾ ಮಂಗಳವಾರ ನಿಧನರಾಗಿದ್ದಾರೆ. ಅವರಿಗೆ 94 ವರ್ಷ ವಯಸ್ಸಾಗಿತ್ತು. ಕಳೆದ ಕೆಲವು ದಿನಗಳಿಂದ ದೆಹಲಿಯ ಏಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅವರು ಮಂಗಳವಾರ ಬೆಳಿಗ್ಗೆ 6 ಗಂಟೆ ಸುಮಾರಿಗೆ ನಿಧನರಾದರು.

ಮಲ್ಹೋತ್ರಾ ಸಕ್ರಿಯ ರಾಜಕೀಯದಲ್ಲಿ ಸುದೀರ್ಘ ಇತಿಹಾಸ ಹೊಂದಿದ್ದು ಕೇದಾರ್ ನಾಥ್ ಸಾಹ್ನಿ ಮತ್ತು ಮದನ್ ಲಾಲ್ ಖುರಾನಾ ಅವರೊಂದಿಗೆ ಅವರು ದೆಹಲಿಯಲ್ಲಿ ಬಿಜೆಪಿಯನ್ನು ಹಲವು ವರ್ಷಗಳ ಕಾಲ ಮುನ್ನಡೆಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. 1999 ರ ಲೋಕಸಭಾ ಚುನಾವಣೆಯಲ್ಲಿ ದಕ್ಷಿಣ ದೆಹಲಿ ಸ್ಥಾನದಿಂದ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರನ್ನು ಭರ್ಜರಿ ಅಂತರದಿಂದ ಸೋಲಿಸಿದ್ದು ಅವರ ಅತಿದೊಡ್ಡ ರಾಜಕೀಯ ವಿಜಯವೆಂದು ಪರಿಗಣಿಸಲಾಗಿದೆ.

ಅವರು ಐದು ಬಾರಿ ಸಂಸದರು ಮತ್ತು ಎರಡು ಬಾರಿ ದೆಹಲಿಯಿಂದ ಶಾಸಕರಾಗಿದ್ದರು ಮತ್ತು ರಾಜಧಾನಿಯಲ್ಲಿ ಪಕ್ಷದ ಪ್ರಮುಖ ಮುಖವಾಗಿದ್ದರು. ಅವರ ನಿಧನಕ್ಕೆ ದೆಹಲಿ ಬಿಜೆಪಿ ಘಟಕ ಸಂತಾಪ ಸೂಚಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರು ವಿಜಯ್ ಕುಮಾರ್ ಮಲ್ಹೋತ್ರಾ ಅವರೊಂದಿಗಿನ ಹಳೆಯ ಫೋಟೋವನ್ನು ಹಂಚಿಕೊಂಡು ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

ಅವರ ಪಾರ್ಥಿವ ಶರೀರವನ್ನು ಬೆಳಿಗ್ಗೆ 8:45 ರ ಸುಮಾರಿಗೆ ಗುರುದ್ವಾರ ರಕಬ್ ಗಂಜ್ ರಸ್ತೆಯಲ್ಲಿರುವ ಅವರ ಅಧಿಕೃತ ನಿವಾಸ 21ಕ್ಕೆ ತರಲಾಗುವುದು, ಅಲ್ಲಿ ಜನರು ಅಂತಿಮ ನಮನ ಸಲ್ಲಿಸಬಹುದು ಎಂದು ದೆಹಲಿ ಬಿಜೆಪಿ ತಿಳಿಸಿದೆ.

ದೆಹಲಿ ಬಿಜೆಪಿಯ ಪ್ರಸ್ತುತ ಅಧ್ಯಕ್ಷ ವೀರೇಂದ್ರ ಸಚ್‌ದೇವ ಮತ್ತು ಪಕ್ಷದ ಎಲ್ಲ ನಾಯಕರು ಸಂತಾಪ ಸೂಚಿಸಿದ್ದಾರೆ.

### ಮಾನ್ವಿ ತಾಕಸಾಪ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ

## ಕನ್ನಡ ಸಾಹಿತ್ಯದ ಬೆಳವಣಿಗೆಗೆ ಪ್ರೇರಣೆ ನೀಡುವ ಶಕ್ತಿ ಸಾಹಿತ್ಯ ಪರಿಷತ್ತಿಗಿದೆ:ಜಿ.ಹಂಪಯ್ಯನಾಯಕ




ಯುವ ಮಾರ್ಗ ಸುದ್ದಿ

**ಮಾನ್ವಿ,,ಸೆ.30–** ಕನ್ನಡ ಭಾಷೆ ಮತ್ತು ಸಾಹಿತ್ಯದ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮಗಳನ್ನು ರೂಪಿಸುವುದರೊಂದಿಗೆ ಸಮಾಜಮುಖಿ ಕಾರ್ಯಕ್ಕೂ ಮತ್ತು ಎಲೆಮರೆಯ ಕಾಯಿಯಂತಿರುವ ಕನ್ನಡದ ಬರಹಗಾರರನ್ನು, ಸಾಹಿತಿಗಳನ್ನು ಗುರುತಿಸಿ ಸಾಹಿತ್ಯದ ಬೆಳವಣಿಗೆಗೆ ಪ್ರೇರಣೆ ನೀಡುವ ಶಕ್ತಿ ಕನ್ನಡ ಸಾಹಿತ್ಯ ಪರಿಷತ್ತಿಗಿದೆ ಎಂದು ಶಾಸಕ ಜಿ.ಹಂಪಯ್ಯನಾಯಕ ಸಾಹುಕಾರ ಹೇಳಿದರು. ಪಟ್ಟಣದ ಶಾಸಕರ ಭವನದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ತಾಲೂಕ ಘಟಕ ನೂತನ ಪದಾಧಿಕಾರಿಗಳ ಪದಗ್ರಹಣ ಮತ್ತು ಸಾಹಿತಿ ಡಾ ಎಸ್ ಎಲ್ ಭೈರಪ್ಪನವರ ನುಡಿನಮನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕನ್ನಡಕ್ಕೆ ಎರಡು ಸಾವಿರ ವರ್ಷಗಳಷ್ಟು ಇತಿಹಾಸವಿದೆ. ಆಗಾಗ ಅನ್ಯ ಭಾಷೆಗಳ ಹಾವಳಿಯಿಂದ ಒಳಗಾಗಿದ್ದರೂ ಕನ್ನಡ ಭಾಷೆ ಸಮೃದ್ಧವಾಗಿ ಮತ್ತೆ ಮೈಕೊಡವಿಕೊಂಡು ಎದ್ದು ನಿಂತಿದೆ. ಕನ್ನಡದ ರೆಂಬೆ ಕೊಂಬೆಗಳನ್ನು ಮಾತ್ರ ಕತ್ತರಿಸಬಹುದು ಆದರೆ ಕನ್ನಡದ ಬೇರು ಆಳವಾಗಿ ಬೇರೂರಿದ್ದು ಯಾರಿಂದಲೂ ಯಾವ ಭಾಷೆ, ಜನಾಂಗದಿಂದಲೂ ಕನ್ನಡದ ಅಸ್ತಿತ್ವಕ್ಕೆ ಧಕ್ಕೆಯಾಗಲಾರದು. ವಿಶ್ವದಲ್ಲಿ ಒಟ್ಟು ಐದು ಸಾವಿರ ಭಾಷೆಗಳಿದ್ದು ಅದರಲ್ಲಿ ಕನ್ನಡ ಬೌಧ್ಧಿಕವಾಗಿ ಉನ್ನತ ಸ್ತರದಲ್ಲಿದೆ ಎಂದರು.

ಕನ್ನಡ ನೆಲ ಜಲ ಭಾಷೆ ಶಾಸಕ ಬಗ್ಗೆ ಅಭಿರುಚಿ ಬೆಳೆಸುವ ಕೆಲಸ ಮಾಡೋಣ. ಇಂದಿನ ಯುವ ಜನಾಂಗ ಸಾಹಿತ್ಯ ಅಭಿರುಚಿ ಬೆಳೆಸಿಕೊಳ್ಳಬೇಕು. ಮುಂದಿನ ದಿನದಲ್ಲಿ 11ನೇ ತಾಲೂಕ ಕನ್ನಡ ಸಾಹಿತ್ಯ ಸಮ್ಮೇಳನ ಸಂಭ್ರಮ ಸಡಗರ ಸಮ್ಮೇಳನ ಆಚರಿಸುವ ನಿರ್ಧಾರ ಮಾಡೋಣ ಎಂದು ತಿಳಿಸಿದರು. ಅನ್ಯ ರಾಜ್ಯದಲ್ಲಿ ಕನ್ನಡಿಗರಿಗೆ ಅನ್ಯಾಯದ ಬಗ್ಗೆ ಖಂಡಿಸುವಂತಹ ಕಾರ್ಯವಾಗಬೇಕು. ಕನ್ನಡ ಭಾಷೆ ಬಗ್ಗೆ ಅಭಿಮಾನ ಗೌರವ ಇರಬೇಕು ಜೊತೆಗೆ ನಿಮ್ಮ ಮಕ್ಕಳಿಗೆ ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿಸುವಂತೆ ಸಲಹೆಯ ನೀಡಿದರು.

ಮಾನ್ವಿ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಪದಾಧಿಕಾರಿಗಳಿಗೆ ಅಭಿನಂದನೆಗಳನ್ನು ಸಲ್ಲಿಸಿ ಕನ್ನಡ ಕುರಿತಾದ ಪ್ರತಿಯೊಂದು ಕಾರ್ಯಕ್ರಮಗಳಿಗೆ ಸದಾ ಸಹಕಾರ ನೀಡುವುದಾಗಿ ಶಾಸಕ ಹಂಪಯ್ಯನಾಯಕ ತಿಳಿಸಿದರು.

ಅಧಿಕಾರ ಸ್ವೀಕರಿಸಿ ಮಾತನಾಡಿದ ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷ ಶರಣಬಸವ ನೀರಮಾನ್ವಿ ಅವರು ನಿಕಟಪೂರ್ವ ಅಧ್ಯಕ್ಷ ರವಿಕುಮಾರ ಪಾಟೀಲ ಅವರು ಮಹಿಳಾ ಸಾಹಿತ್ಯ ಸಮ್ಮೇಳನ ಹಾಗೂ 10 ನೇ ಕನ್ನಡ ಸಾಹಿತ್ಯ ಸಮ್ಮೇಳನ ಸೇರಿದಂತೆ ಅನೇಕ ಕನ್ನಡ ಪರ ಕಾರ್ಯಕ್ರಮಗಳನ್ನು ನಡೆಸಿದ್ದಾರೆ. ಮುಂಬರುವ ದಿನಗಳಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಮೂಲಕ ಸರ್ವರ ಅಭಿಪ್ರಾಯಗಳನ್ನು ಪಡೆದುಕೊಂಡು ಕಾರ್ಯಕ್ರಮಗಳನ್ನು ನಡೆಸಿಕೊಂಡು ಹೋಗುವುದಾಗಿ ಹೇಳಿದರು

ಹಿರಿಯ ಸಾಹಿತಿ ರಮೇಶಬಾಬು ಯಾಳಗಿ(2ನೇಪುಟಕ್ಕೆ)



## ಜುಬಿನ್ ಮೊಹಪಾತ್ರ ವಿವಿಧೆಡೆ ಅನಿರೀಕ್ಷಿತ ಭೇಟಿ: ಬಾಕಿ ಕಾಮಗಾರಿಗಳ ಪರಿಶೀಲನೆ

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.30–**ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ವಿವಿಧೆಡೆ ಅನಿರೀಕ್ಷಿತ ಭೇಟಿ ಕೈಗೊಂಡು 15ನೇ ಹಣಕಾಸು ಆಯೋಗದ ಅಡಿಯಲ್ಲಿನ ಕಾಮಗಾರಿಗಳ ಪ್ರಗತಿ ಪರಿಶೀಲಿಸಿದರು.

6–7 ವರ್ಷಗಳಿಂದ ಬಾಕಿ ಉಳಿದ ಕಾರ್ಯಗಳ ಬಗ್ಗೆ ಪರಿಶೀಲಿಸಿದ ಆಯುಕ್ತರು, ಬಾಕಿ ಇರಿಸಿಕೊಂಡ ಎಲ್ಲ ರಸ್ತೆಗಳು ಮತ್ತು ಚರಂಡಿ ಕಾರ್ಯಗಳನ್ನು ತಕ್ಷಣ ಪೂರ್ಣಗೊಳಿಸಬೇಕು ಎಂದು ಠೇಕುದಾರರಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.

ರಸ್ತೆಗಳು ಮತ್ತು ಚರಂಡಿಗಳು ನಿಗದಿಪಡಿಸಿದಂತೆ ವೈಜ್ಞಾನಿಕ ರೀತಿಯಲ್ಲಿಯೇ ಅಗಲ, ಉದ್ದ ಇರುವಂತೆ ಮತ್ತು ಕಾಮಗಾರಿಯು ಗುಣಮಟ್ಟದಿಂದ ಕೂಡಿರುವಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು. ನಿಗದಿತ ಸಮಯದಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.



**ಘನ ತ್ಯಾಜ್ಯ ನಿರ್ವಹಣೆ ಕಾರ್ಯಗಳ ಪರಿಶೀಲನೆ:** ಆಯುಕ್ತರು, ಇದೆ ವೇಳೆ ಘನ ತ್ಯಾಜ್ಯ ನಿರ್ವಹಣೆ ಕಾರ್ಯಗಳ ಪರಿಶೀಲನೆ ನಡೆಸಿದರು.

ನಾಗರಿಕರು, ತ್ಯಾಜ್ಯ ವಿಸರ್ಜಿಸುವ ಅನಧಿಕೃತ ಸ್ಥಳಗಳನ್ನು ತ್ವರಿತವಾಗಿ ತೆರವುಗೊಳಿಸುವಂತೆ ಘನ ತ್ಯಾಜ್ಯ ನಿರ್ವಹಣೆ ತಂಡಕ್ಕೆ ಇದೆ ವೇಳೆ ಆಯುಕ್ತರು ಸೂಚನೆ ನೀಡಿದರು.

**ಸಾರ್ವಜನಿಕರಿಂದ ಮೆಚ್ಚುಗೆ:** ಘನ ತ್ಯಾಜ್ಯ ನಿರ್ವಹಣೆ ತಂಡದವರು ಈಗಾಗಲೇ, ತ್ಯಾಜ್ಯ ವಿಸರ್ಜಿಸುವ ಅನಧಿಕೃತ ಅನೇಕ ಸ್ಥಳಗಳನ್ನು ತೆರವುಗೊಳಿಸಿದ್ದರಿಂದಾಗಿ ಸಮಸ್ಯೆ ಗಣನೀಯವಾಗಿ ಕಡಿಮೆಯಾಗಿದೆ ಎಂದು ಇದೆ ವೇಳೆ ನಾಗರಿಕರು ಆಯುಕ್ತರ ಮುಂದೆ ಸಂತಷ ವ್ಯಕ್ತಪಡಿಸಿದರು.

**ನಾಗರಿಕರಲ್ಲಿ ಮನವಿ:** ಸಾರ್ವಜನಿಕರು, ಚರಂಡಿಗಳಲ್ಲಿ ಪ್ಲಾಸ್ಟಿಕ್ ಮತ್ತಿತರ ತ್ಯಾಜ್ಯ ವಸ್ತುಗಳನ್ನು ಎಸೆಯುವುದರಿಂದ ಅದು ತುಂಬಿ, ಮಳೆ ನೀರು ಸರಾಗವಾಗಿ(2ನೇಪುಟಕ್ಕೆ)

## ಶ್ರೀಮಹರ್ಷಿ ವಾಲ್ಮೀಕಿ ಜಯಂತಿಗೆ ಅಗತ್ಯ ಸಿದ್ಧತೆಯಾಗಲಿ: ಜಿಲ್ಲಾಧಿಕಾರಿ ನಿತೀಶ್ ಕೆ



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.30–**ಜಿಲ್ಲಾಡಳಿತ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಆಚರಿಸಲ್ಪಡುವ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವಕ್ಕೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಯಂತ್ಯುತ್ಸವ ನಿಮಿತ್ತ ಅಕ್ಟೋಬರ್ 7ರಂದು ನಗರದ ಸರ್ಕಾರಿ ಪದವಿ ಕಾಲೇಜ್ ಹತ್ತಿರದ ವಾಲ್ಮೀಕಿ ವೃತ್ತದಲ್ಲಿನ ಮಹರ್ಷಿ ವಾಲ್ಮೀಕಿ ಅವರ ಪುತ್ಥಳಿಗೆ ಗಣ್ಯರಿಂದ ಪುಷ್ಪಾರ್ಚನೆ ನಡೆಯಲಿದ್ದು, ವಾಲ್ಮೀಕಿ ವೃತ್ತ ಸೇರದಂತೆ ನಗರದ ಎಲ್ಲಾ ಮಹನಿಯರ ವೃತ್ತಗಳನ್ನು ವಿದ್ಯುದ್ದೀಪಗಳಿಂದ ಅಲಂಕರಿಸಬೇಕು. ನಗರದ ಆಶಾಪೂರ ರಸ್ತೆಯ ವಾಲ್ಮೀಕಿ ಭವನದವರೆಗೆ ಮೆರವಣಿಗೆ ನಡೆಯಲಿದ್ದು, ಎಲ್ಲಾ ರಸ್ತೆಗಳಲ್ಲಿ ಶುಚಿತ್ವ ಇರುವಂತೆ ನೋಡಿಕೊಳ್ಳಬೇಕು.

ಮಹಿಳೆಯರಿಂದ ಕುಂಭ ಮೆರವಣಿಗೆ ಸಹಿತ ಮೆರವಣಿಗೆ ಸಾಗುವ ಮಾರ್ಗದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆಯಾಗಬೇಕು ಎಂದು ಜಿಲ್ಲಾ (2ನೇಪುಟಕ್ಕೆ)

## ಸೋಂಕಿತ ಪ್ರಾಣಿಗಳಿಂದ ಮನುಷ್ಯರಿಗೆ ರೇಬಿಸ್ ಸೋಂಕು ಹರಡುತ್ತದೆ : ಡಾ.ಪ್ರಾಣೇಶ ಜೋಶಿ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಸೆ.30–** ರೇಬಿಸ್ ರೋಗವು ರೇಬಿಸ್ ಎಂಬ ಸೋಕಿತ ಪ್ರಾಣಿಗಳಿಂದ ಮನುಷ್ಯರಿಗೆ ಈ ವೈರಸ್ ಬರುತ್ತದೆ. ಅಂದರೆ ಸೋಂಕಿತ ಪ್ರಾಣಿಗಳು ಮನುಷ್ಯರಿಗೆ ಕಚ್ಚುವುದರಿಂದ ರೋಗವು ಹರಡುತ್ತದೆ ಎಂದು ಗುರುಗುಂಟಾ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ ಜೋಶಿ ಹೇಳಿದರು.

ಸಮೀಪದ ಗುರುಗುಂಟಾ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಂಡ ವಿಶ್ವ ರೇಬಿಸ್ ದಿನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ರೋಗವು ಶೇಕಡಾ 96% ರಷ್ಟು ಬೀದಿ ನಾಯಿಗಳಿಂದ ಸಂಭವಿಸುತ್ತದೆ ನಾಯಿ ಕಡಿತದ ಬಗ್ಗೆ ಸಾರ್ವಜನಿಕರು ಜಾಗೃತಿ ವಹಿಸಬೇಕು. ಒಂದು ವೇಳೆ ನಾಯಿ ಕಡಿತವಾದಲ್ಲಿ ಸಾಂಪ್ರದಾಯಿಕ ಚಿಕಿತ್ಸೆಗಳನ್ನು ಅನುಸರಿಸದೇ ಸಾರ್ವಜನಿಕ ಆರೋಗ್ಯ ಕೇಂದ್ರದಲ್ಲಿ ತಡೆಗಟ್ಟುವಲಸಿಕೆ (ARV ) ಚಿಕಿತ್ಸೆಯನ್ನು ಪಡೆಯಲು ತಿಳಿಸಿದರು.

ನಂತರ ಸಾಂಕ್ರಾಮಿಕ ರೋಗ ಶಾಸ್ತ್ರಜ್ಞರಾದ ಅಶೋಕ್ ಮಾಡಿಕಾರ ಮಾತನಾಡಿ, ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ರೇಬಿಸ್ ತಡೆಗಟ್ಟುವಲಸಿಕೆ (ARV) ಚಿಕಿತ್ಸೆ ಉಚಿತವಾಗಿ ಲಭ್ಯವಿರುತ್ತದೆ.ನಾಯಿ ಅಥವಾ ಯಾವುದೇ ಪ್ರಾಣಿ ಕಡಿತವಾದಲ್ಲಿ ತಕ್ಷಣವೇ ನಿಮ್ಮ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಚಿಕಿತ್ಸೆ ಪಡೆಯಲು ತಿಳಿಸಿದರು.



ಈ ಸಂದರ್ಭದಲ್ಲಿ ಬಾಬಣ್ಣ.ಶಾಮರಾಯ,ರೇವೂಶೆಟ್ಟಿ. ಶುಶ್ರೂಷಕರಾದ ಲಿಬಿಯಾ.ಗೀತಾ, ತುಳಜಾ ಸೇರಿದಂತೆ ಸಾರ್ವಜನಿಕರು ಇದ್ದರು.

## ಮೊದಲನೇಯ ಪುಟದಿಂದ

# ಕನ್ನಡ ಸಾಹಿತ್ಯದ ಬೆಳವಣಿಗೆಗೆ ಪ್ರೇರಣೆ ನೀಡುವ ಶಕ್ತಿ ಸಾಹಿತ್ಯ ಪರಿಷತ್ತಿಗಿದೆ:ಜಿ.ಹಂಪಯ್ಯನಾಯಕ

ಅವರು ದಿ.ಡಾ.ಎಸ್.ಎಲ್.ಭೈರಪ್ಪನವರ ಕುರಿತು ನುಡಿ ನಮನ ಸಲ್ಲಿಸಿದ ಉಪನ್ಯಾಸದಲ್ಲಿ ಜೀವನದ ಎಲ್ಲಾ ನೋವುಗಳನ್ನು ಮೀರಿ ಬೆಳೆದವರು ದಿ. ಡಾ.ಎಸ್. ಎಲ್. ಭೈರಪ್ಪನವರ ಬದುಕು ಹಾಸಿಗೆ ಆಗಿರಲಿಲ್ಲ ಮುಳ್ಳಿನ ಹಾಸಿಗೆಯಾಗಿತ್ತು. ಅದನ್ನು ಮೀರಿ ಬಡತನವನ್ನು ಬಂಡವಾಳವಾಹಿಸಿಕೊಂಡು ಜೀವನಾನುಭವ ಮತ್ತು ಓದಿನ ಮೂಲಕ ನಾಡಿನ ಶ್ರೇಷ್ಠ ಕಾದಂಬರಿಕಾರಾದರು ಭೈರಪ್ಪನವರು ಜೀವನದ ಜೊತೆಗೆ ಗ್ರಂಥಾಲಯವನ್ನು ಪ್ರೀತಿಸಿದವರು. ಮನೆಯಲ್ಲಿನ ಬಡತನವನ್ನು ಬಂಡವಾಳವಾಗಿಸಿಕೊಂಡು ಶಿಕ್ಷಣ ಪಡೆದರು. ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಸಂಸ್ಕೃತಿಯನ್ನು ಅಧ್ಯಯನ ಮಾಡಿದ ಅವರು ತಮ್ಮ ಕಾದಂಬರಿಗಳಲ್ಲಿ ಓದುಗರ ಮನಸ್ಸನ್ನು ಸೆಳೆಯುವ ಅನುಪಮ ಕಥನ ತಂತ್ರಗಾರಿಕೆಯನ್ನು ಬಳಸಿಕೊಂಡು ಬರೆದು ಓದುಗರ ಮೆಚ್ಚುಗೆಗೆ ಪಾತ್ರರಾದರು. ತತ್ವಜ್ಞಾನಿಗಳಾಗಿ, ಕಾದಂಬರಕಾರರಾಗಿ, ಸಾರಸ್ವತ ಲೋಕದಲ್ಲಿ ಚಿರಸ್ಮರಣೀಯರಾಗಿದ್ದಾರೆ ಎಂದರು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಸಾಪ ಜಿಲ್ಲಾ ಗೌರವ ಕಾರ್ಯದರ್ಶಿ ತಾಯಪ್ಪ ಬಿ.ಹೊಸೂರು, ಕಸಾಪ ನಿಕಟಪೂರ್ವ ಅಧ್ಯಕ್ಷ ರವಿಕುಮಾರ ಪಾಟೀಲ್ ವಕೀಲ, ಕಸಾಪ ಸದಸ್ಯರಾದ ಹೆಚ್.ಶರ್ಫುದ್ದೀನ್ ಪೋತ್ನಾಳ ಮಾತನಾಡಿದರು. ಈ ಸಂದರ್ಭದಲ್ಲಿ ನೂತನ ಕಸಾಪ ಪದಾಧಿಕಾರಿಗಳನ್ನು ಸ್ವಾಗತಿಸಿಕೊಳ್ಳಲಾಯಿತು.

ಈ ಕಾರ್ಯಕ್ರಮದಲ್ಲಿ ಹೆಚ್. ಶರ್ಫುದ್ದೀನ್ ಪೋತ್ನಾಳ, ರಮೇಶಬಾಬು ಯಾಳಗಿ ಸಾಹಿತಿಗಳು ಮಾನ್ವಿ, ಮಧುಪಾಂಡೆ, ಸಾಹಿತಿಗಳು ಮಾನ್ವಿ, ಸುರೇಶ ಕುರ್ಡಿ, ಅಧ್ಯಕ್ಷರು ಸರ್ಕಾರಿ ನೌಕರರ ಸಂಘ ಮಾನ್ವಿ, ಪಿ. ತಿಪ್ಪಣ್ಣ ಬಾಗಲವಾಡ, ಅಧ್ಯಕ್ಷರು ಸಿದ್ದಾರ್ಥ ಶಿಕ್ಷಣ ಸಂಸ್ಥೆ ಮಾನ್ವಿ, ಕೆ.ಇ. ನರಸಿಂಹ, ಅಧ್ಯಕ್ಷರು ನೇತಾಜಿ ಶಿಕ್ಷಣ ಸಂಸ್ಥೆ ಮಾನ್ವಿ, ಹನುಮಮಂತಪ್ಪ ಕೊಟ್ನೆಕಲ್ ಅಧ್ಯಕ್ಷರು ಕಸಾಪ ಹಿರೇಕೊಟ್ನೆಕಲ್ ಹೋಬಳಿ ಘಟಕ ಹಾಗೂ ಪದಾಧಿಕಾರಿಗಳು, ಗೌರವ ಸಲಹೆಗಾರರು ಇದ್ದರು. ರಾಮು ಹೊಳೆಯಪ್ಪನವರ್ ಪ್ರಾರ್ಥಿಸಿದರು ಸೈಯದ್ ಮಿನ್ಹಾಜುಲ್ ಹಸನ್ ಸ್ವಾಗತಿಸಿದರು ಲಕ್ಷ್ಮಣ್ ಜಾನೇಕಲ್ ನಿರೂಪಿಸಿದರು ಚನ್ನಬಸವ ಮಾಡಗಿರಿ ವಂದಿಸಿದರು.

# ಜುಬಿನ್ ಮೊಹಪಾತ್ರ ವಿವಿಧೆಡೆ ಅನಿರೀಕ್ಷಿತ ಭೇಟಿ: ಬಾಕಿ ಕಾಮಗಾರಿಗಳ ಪರಿಶೀಲನೆ

ಹರಿಯದೇ ರಸ್ತೆಗಳಿಗೆ ಬರುತ್ತಿದೆ. ಈ ರೀತಿ ಆಗಬಾರದು. ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು.

ದಂಡದ ಎಚ್ಚರಿಕೆ: ಚರಂಡಿಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಎಸೆಯುವುದು ಕಂಡುಬಂದಲ್ಲಿ ಇನ್ಮುಂದೆ ಅಂತವರಿಗೆ ದಂಡ ವಿಧಿಸಲಾಗುವುದು ಮತ್ತು ಕಾನೂನು ಕ್ರಮ ಜರುಗಿಸಲಾಗುವುದು ಎಂದು ಆಯುಕ್ತರು ಇದೆ ವೇಳೆ ಎಚ್ಚರಿಕೆ ನೀಡಿದರು.

ಅಧಿಕಾರಿಗಳು, ಸಿಬ್ಬಂದಿಗೆ ಮನವರಿಕೆ: ರಾಯಚೂರು ನಗರಸಭೆಯು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದ್ದು, ಇದರಿಂದಾಗಿ ನಗರದ ಅಭಿವೃದ್ಧಿ ಕಾರ್ಯಗಳು ವೇಗವಾಗಿ ಮುನ್ನಡೆಯುವ ಉದ್ದೇಶದಿಂದ ಅನಿರೀಕ್ಷಿತ ಭೇಟಿಯಂತಹ ಕಾರ್ಯಕ್ರಮದ ಮೂಲಕ ಪರಿಶೀಲನೆ ಮಾಡಲಾಗುತ್ತಿದೆ.

ಈ ರೀತಿಯ ಕ್ರಮಗಳಿಂದಲೇ ಮಹಾನಗರ ಪಾಲಿಕೆಯ ನಿರ್ವಹಣೆಯು ಹೆಚ್ಚು ಪಾರದರ್ಶಕ ಮತ್ತು ಕಾರ್ಯಕುಶಲತೆಯಿಂದ ನಡೆಯಲಿದೆ ಎಂದು ಇದೆ ವೇಳೆ ಆಯುಕ್ತರು, ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಮನವರಿಕೆ ಮಾಡಿದರು.

# ಶ್ರೀಮಹರ್ಷಿ ವಾಲ್ಮೀಕಿ ಜಯಂತಿಗೆ ಅಗತ್ಯ ಸಿದ್ಧತೆಯಾಗಲಿ: ಜಿಲ್ಲಾಧಿಕಾರಿ ನಿತೀಶ್ ಕೆ

ಪೊಲೀಸ್ ಇಲಾಖೆಗೆ ಸೂಚನೆ ನೀಡಿದರು.ಮೆರವಣಿಗೆಗೆ ಜಾನಪದ ಕಲಾ ತಂಡಗಳ ವ್ಯವಸ್ಥೆ ಮಾಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗೆ ಸೂಚನೆ ನೀಡಿದರು.ಆಮಂತ್ರಣ ಪತ್ರಿಕೆಗಳನ್ನು ಶಿಷ್ಟಾಚಾರದಂತೆ ಮುದ್ರಿಸಿ ಗಣ್ಯರಿಗೆ ತಲುಪಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.ಮುಖಂಡರಿಂದ ಸಲಹೆ: ಕಾರ್ಯಕ್ರಮದಲ್ಲಿ ಮಹರ್ಷಿ ವಾಲ್ಮೀಕಿ ಅವರ ಜೀವನ ಸಂದೇಶಗಳ ಬಗ್ಗೆ ಉಪನ್ಯಾಸ ಏರ್ಪಡಿಸಬೇಕು. ಕಾರ್ಯಕ್ರಮಕ್ಕೆ ಎಲ್ಲ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಜರಾಗಬೇಕು. ಕನ್ನಡ ಸಾಹಿತ್ಯ ಪರಿಷತ್ತಿನಿಂದ ಪುಸ್ತಕ ಖರೀದಿಸಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ವಾಲ್ಮೀಕಿ ರಾಮಾಯಣದ ಬಗ್ಗೆ ತಿಳಿವಳಿಕೆ ಮೂಡಿಸುವ ಕಾರ್ಯಕ್ರಮ ಆಯೋಜನ ಮಾಡಬೇಕು ಎಂದು ವಾಲ್ಮೀಕಿ ಸಮಾಜದ ಮುಖಂಡರು ಸಭೆಗೆ ಸಲಹೆ ಮಾಡಿದರು.ಕುಡಿವ ನೀರು, ಇನ್ನಿತರ ಸೌಲಭ್ಯ ಕಲ್ಪಿಸಿ: ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವದ ಮೆರವಣಿಗೆಯಲ್ಲಿ ವಾಲ್ಮೀಕಿ ಸಮಾಜದ ಜನತೆ ಸಾವಿರಾರು ಸಂಖ್ಯೆಯಲ್ಲಿ ಭಾಗಿಯಾಗಲಿದ್ದಾರೆ. ಎಲ್ಲ ಜನತೆಗೆ ಜಿಲ್ಲಾಡಳಿತದಿಂದ ಕುಡಿಯುವ ನೀರು ಮತ್ತು ಇನ್ನಿತರ ವ್ಯವಸ್ಥೆ ಮಾಡಬೇಕು ಎಂದು ಸಮಾಜದ ಮುಖಂಡರು, ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿದರು.ವಾಲ್ಮೀಕಿ ಭವನ ಸರಿಪಡಿಸಿ: ನಗರದ ವಾಲ್ಮೀಕಿ ಭವನವನ್ನು ದುರಸ್ತಿಗೊಳಿಸಬೇಕು ಎಂದು ಇದೆ ವೇಳೆ ಮುಖಂಡರು ಸಭೆಗೆ ಸಲಹೆ ಮಾಡಿದರು. ಮಹರ್ಷಿ ವಾಲ್ಮೀಕಿ ಭವನ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ಭವನಗಳಿಗೆ ಪಿಓಪಿ, ಸೌಂಡ್ ಸಿಸ್ಟಂ ಸೇರಿದಂತೆ ಎಲ್ಲ ವ್ಯವಸ್ಥೆ ಮಾಡುವುದಾಗಿ ಜಿಲ್ಲಾಧಿಕಾರಿಗಳು ಪ್ರತಿಕ್ರಿಯಿಸಿದರು.ಸದ್ಯದಲ್ಲೇ ಬುಡಕಟ್ಟು ಉತ್ಸವ: ಜಿಲ್ಲೆಯಲ್ಲಿ ನವೆಂಬರ್ ಅಥವಾ ಡಿಸೆಂಬರ್ ಮಾಹೆಗಳಲ್ಲಿ ಎರಡು ದಿನಗಳ ಬುಡಕಟ್ಟು ಉತ್ಸವಕ್ಕೆ ಸಿದ್ಧತೆ ಮಾಡಲಾಗುತ್ತಿದ್ದು, ವಾಲ್ಮೀಕಿ ಸಮುದಾಯ ಸೇರಿದಂತೆ ಇನ್ನಿತರ ಸಮುದಾಯದ ಜನತೆ ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

**ಎಸ್ ಟಿ ವರ್ಗದ ಜನರು ಅರ್ಜಿ ಸಲ್ಲಿಸಲು ಮನವಿ:** ರಾಯಚೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ, ಮನೆ ಇಲ್ಲದೇ ಗುಡಿಸಲು ಮತ್ತು ಇನ್ನೀತರ ಕಡೆ ವಾಸಿಸುವ ಅರ್ಹ ಎಸ್ ಸಿ ಹಾಗೂ ಎಸ್.ಟಿ ಸಮುದಾಯದ ಜನತೆಗೆ ಮಹಾನಗರ ಪಾಲಿಕೆಯಿಂದ ವಿಮಾನ ನಿಲ್ದಾಣದ ಹತ್ತಿರ ಮನೆಗಳನ್ನು ನಿರ್ಮಿಸಿ ಕೊಡಲಾಗುತ್ತಿದೆ. ಇದರಲ್ಲಿ 1000 ಮನೆಗಳು ಪರಿಶಿಷ್ಟ ಪಂಗಡ ಎಸ್ ಟಿ ಜನತೆಗೆ ಮೀಸಲಿದ್ದು, ಇದುವರೆಗೆ ಕಡಿಮೆ ಸಂಖ್ಯೆಯಲ್ಲಿ ಅರ್ಜಿಗಳು ಬಂದಿವೆ. ಅರ್ಹ ಎಸ್ ಟಿ ಸಮುದಾಯದ ಫಲಾನುಭವಿಗಳು ಅರ್ಜಿ ಸಲ್ಲಿಸಿ ವಸತಿ ಯೋಜನೆಯ ಲಾಭ ಪಡೆಯಬೇಕು. ಈ ಬಗ್ಗೆ ವಾಲ್ಮೀಕಿ ಸಮಾಜದ ಮುಖಂಡರು ಕಡುಬಡ ಎಸ್ಟಿ ಜನತೆಗೆ ಈ ವಿಷಯ ತಿಳಿಸಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

# ಮಹಾನಗರ ಪಾಲಿಕೆಯಿಂದ ಅಕ್ಟೋಬರ್ 02ರಂದು ನಾಡದೇವಿಯ ಮೆರವಣಿಗೆ

**ರಾಯಚೂರು,ಸೆ.30–**ರಾಯಚೂರು ಮಹಾನಗರ ಪಾಲಿಕೆಯಿಂದ ನಾಡಹಬ್ಬ ದಸರಾ ಮಹೋತ್ಸವದ ಅಂಗವಾಗಿ ಅಕ್ಟೋಬರ್ 02ರ ಮಧ್ಯಾಹ್ನ 1 ಗಂಟೆಗೆ ಪಾಲಿಕೆ ಜೋನಲ್ 1ರ ಕಚೇರಿಯಿಂದ ಮಾಣಿಕಪ್ರಭು ಬನ್ನಿ ಮಂಟಪದವರೆಗೆ ನಾಡದೇವಿಯ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ.

ಕಿಲ್ಲೇ ಬೃಹನ್ಮಠದ 108 ಸಾವಿರ ದೇವರ ಸಂಸ್ಥಾನದ ಷ//ಬ್ರ/ /ಶ್ರೀ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮೀಜಿ ಕಾರ್ಯಕ್ರಮ್ಮದ ಸಾನ್ನಿಧ್ಯ ವಹಿಸಲಿದ್ದಾರೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ನಾಡದೇವಿ ಭುನೇಶ್ವರಿಗೆ ಪೂಜೆ ಸಲ್ಲಿಸಲಿದ್ದಾರೆ.

ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಪಾಲಿಕೆಯ ಉಪಾಧ್ಯಕ್ಷರಾದ ಜೆ.ಸಾಜೀದ್ ಸಮೀರ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ಪಾಲಿಕೆಯ ಸದಸ್ಯರಾದ ಲಕ್ಷ್ಮೀ, ಡಿ.ಎ ಸಿಮನ್, ಜಯಣ್ಣ, ವಿ.ನಾಗರಾಟ, ಬಿ. ರಮೇಶ, ಶರಣಬಸಪ್ಪ ಬಲ್ಲಟಗಿ, ಬುಜ್ಜಮ್ಮ ಶಂಕರಪ್ಪ,

ಅನಿತಾ ಜಿ.ತಿಮ್ಮಾರೆಡ್ಡಿ, ನಿಮಿತ್ ಸಲ್ಯಾ ಮಹ್ಮದ್ ಶಾಲಂ, ಖುರ್ಷಿದಾ ಬಾನು ಅಬ್ದುಲ್ ವಾಹಿದ್, ದರೂರ ಬಸವರಾಜ ಪಾಟೀಲ್, ರತ್ನ ಪ್ರಶಾಂತಿ, ಎಂ ಪವನ್ ಕುಮಾರ ಎಂ.ಈರಣ್ಣ, ಉಮಾ ರವೀಂದ್ರ ಜಲ್ದಾರ,

ನೂರ ಪಾಷಾ ಎಸ್, ಗಾಯತ್ರಿ ಹರೀಶ ನಾಡಗೌಡ, ಈ ಶಶಿರಾಜ, ಲಂತಾ ಕಡಗೋಲ್ ಅಂಜಿನಯ್ಯ, ಹೇಮಲತಾ ಪಿ.ಬೂದೆಪ್ಪ, ಎನ್.ಕೆ.ನಾಗರಾಜ, ಜಿಂದಪ್ಪ, ಸರೋಜಮ್ಮ ದೊಡ್ಡ ಮಲ್ಲೇಶಪ್ಪ, ಎನ್. ಶ್ರೀನಿವಾಸರೆಡ್ಡಿ, ರೇಖಾ ಮಹೀಂದ್ರರೆಡ್ಡಿ, ಶೈನಾಜ್ ಬೇಗಂ ಜಿ.ಹೆಚ್.ಪಾಜಿಬಾಬು, ಪಿ.ನವನೀತಾ ಪಿ. ಶ್ರೀನಿವಾಸ ರೆಡ್ಡಿ, ಕವಿತಾ ಜಿ. ತಿಮ್ಮಾರೆಡ್ಡಿ , ಸುನೀಲ್ ಕುಮಾರ್, ವೆಂಕಟಮ್ಮ ಎನ್. ಶ್ರೀನಿವಾಸರೆಡ್ಡಿ, ಅಂಜನಮ್ಮ ಶ್ಯಾಮಸುಂದರ್, ಸಮೀನಾ ಮುಕ್ರಂ, ಸಣ್ಣ ನರಸರೆಡ್ಡಿ, ತಿಮ್ಮಪ್ಪ ನಾಗೇಂದ್ರಪ್ಪ, ಸ್ವಾತಿ ಹರಿಬಾಬು, ನಾಮ ನಿರ್ದೇಶಿತ ಸದಸ್ಯರಾದ ಮಹ್ಮದ್ ಫೆರೋಜ್, ವೆಂಕಟೇಶ, ಅಮಿತ್ ಕುಮಾರ ಲೋಧ, ಮಣಿಕಂಠ, ಮುನಿಸ್ವಾಮಿ ಹಾಗೂ ಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಾಪಾತ್ರ, ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತರಾದ ಶರಣಬಸಪ್ಪ ಕೋಟೆಪ್ಪಗೋಳ, ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷರಾಣಿ ಎಂ., ಅಭಿವೃದ್ಧಿ ವಿಭಾಗದ ಉಪ ಆಯುಕ್ತರಾದ ಮೇನಕಾ ಪಟೇಲ್ ಅವರು ಭಾಗಿಯಾಗಲಿದ್ದಾರೆ ಎಂದು ಪಾಲಿಕೆಯ ಪ್ರಕಟಣೆ ತಿಳಿಸಿದೆ.

# ಶಿಕ್ಷಣವು ಪವಿತ್ರ ವೃತ್ತಿ, ನಿರಂತರ ಜ್ಞಾನಾರ್ಜನೆಯ ಮೂಲಕ ಸುಗಂಧ ಬೆಳೆಸಿ : ಡಾ.ಕುಬಕಡ್ಡಿ

ಯುವ ಮಾರ್ಗ ಸುದ್ದಿ



**ಆಳಂದ,ಸೆ.30–** ಆಧುನಿಕ ತಂತ್ರಜ್ಞಾನದ ಜೊತೆಗೆ ಪ್ರಾಚೀನ ವಿದ್ಯೆಯನ್ನು ಸಮನ್ವಯಗೊಳಿಸಿ ಶಿಕ್ಷಕರು ತಮ್ಮ ಕೌಶಲ್ಯಗಳನ್ನು ಬೆಳೆಸಿಕೊಂಡು ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಭಾವನೆಯನ್ನು ಉತ್ತೇಜಿಸಬೇಕು ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಸ್ಕೂಲ್ ಆಫ್ ಲೀಗಲ್ ಸ್ಟಡೀಸ್‌ನ ಡೀನ್ ಡಾ.ಬಸವರಾಜ್ ಕುಬಕಟ್ಟಿ ಅವರು ಕರೆ ನೀಡಿದರು.

ಪಟ್ಟಣದ ಜೀವನ ಜ್ಯೋತಿ ಶಿಕ್ಷಣ ಮತ್ತು ಕಲ್ಯಾಣ ಸಂಸ್ಥೆ ತಡಕಲ್ ಹಾಗೂ ಎಸ್‌ಆರ್‌ಜಿ ಫೌಂಡೇಶನ್‌ನ ಆಶ್ರಯದಲ್ಲಿ ಎಸ್‌ಆರ್‌ಜಿ ಕಾಂಪ್ಲೆಕ್ಸ್ ಬಳಿಯ ಶೈಕ್ಷಣಿಕ ಆವರಣದಲ್ಲಿ ಹಮ್ಮಿಕೊಂಡ ಸರ್ವೋತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಹಾಗೂ ಗೌರವ ಸತ್ಕಾರ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಣ ವೃತ್ತಿಯನ್ನು "ಪವಿತ್ರ ಧರ್ಮ" ಎಂದು ವರ್ಣಿಸಿದ ಅವರು, "ಇದು ಹುದ್ದೆಯ ವೇತನಕ್ಕಾಗಿಯಲ್ಲ, ಬದಲಿಗೆ ಜೀವನದ ಉದ್ದೇಶಕ್ಕಾಗಿ. ಶಿಕ್ಷಕರು ನಿರಂತರ ಓದು-ಅಧ್ಯಯನದ ಮೂಲಕ ತಮ್ಮನ್ನು ತಾವು ಮೇಲ್ಪಂಕ್ತಿಗೆ ಬರಲು ತಯಾರಿ ಮಾಡಿಕೊಳ್ಳಬೇಕು. ಶ್ರೀಗಂಧದ ಕಟ್ಟಿಗೆ ತಿಕ್ಕಿ ತೆಗೆದಾಗ ಸುಗಂಧ ಹೊರಬರುವಂತೆ, ಶಿಕ್ಷಕರೂ ಜ್ಞಾನದ ಆಳವಾದ ಅಧ್ಯಯನದಿಂದ ಸಮಾಜಕ್ಕೆ ಸುಗಂಧವನ್ನು ಹರಡಬೇಕು" ಎಂದು ಸಲಹೆ ನೀಡಿದರು.

ಶಿಕ್ಷಕರನ್ನು ಸರ್ಕಾರಿ ಶಾಲೆಗಳು, ಕಾಲೇಜುಗಳು, ಖಾಸಗಿ ಸಂಸ್ಥೆಗಳಲ್ಲಿ ವಿಭಿನ್ನ ಸ್ಥಾನಗಳಲ್ಲಿ ಕಾಣುತ್ತೇವೆ ಆದರೆ, "ಶಿಕ್ಷಣದಲ್ಲಿ ಮಾಡುವ ಕೆಲಸವೇ ಮುಖ್ಯ. ಸ್ಪರ್ಧಾತ್ಮಕ ಜಗತ್ತಿಗೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಲು ಶಿಕ್ಷಕರು ಮಾದರಿಯಾಗಿ ನಿಲ್ಲಬೇಕು. ಇದಕ್ಕಾಗಿ ಹೆಚ್ಚಿನ ಶಕ್ತಿ ಮತ್ತು ಉತ್ಸಾಹವನ್ನು ತಂದುಕೊಳ್ಳಿ" ಎಂದು ಸಲಹೆ ನೀಡಿದರು.

ಶಿಕ್ಷಣ ವ್ಯವಸ್ಥೆಯ ಸವಾಲುಗಳನ್ನು ಎದುರಿಸುತ್ತಿರುವ "ಶಿಕ್ಷಕರನ್ನು ಅನ್ಯ ಕಾರ್ಯಗಳಿಗೆ ತೊಡಗಿಸುವುದು ಶೈಕ್ಷಣಿಕ ಕುಂಠಿತತೆಗೆ ಕಾರಣವಾಗುತ್ತದೆ. ಶಿಕ್ಷಕರ ಮೇಲೆ ಒತ್ತಡ ಹೆಚ್ಚುತ್ತದೆ ಮತ್ತು ಮಕ್ಕಳು ಸರ್ಕಾರಿ ಶಾಲೆಗಳನ್ನು ತ್ಯಜಿಸುತ್ತಿದ್ದಾರೆ. ಸರ್ಕಾರಿ ಶಾಲೆಗಳಲ್ಲಿ ಪ್ರತಿಭಾವಂತ ಉತ್ತಮ ಶಿಕ್ಷಕರ ಸಂಖ್ಯೆ ಹೆಚ್ಚು. ಅವರ ಕ್ಷೇತ್ರದಲ್ಲಿ ಸಾಧನೆಗೆ ಅವಕಾಶ ನೀಡಬೇಕಾಗಿದೆ ಎಂದ ಅವರು, ಈ ನಡುವೆಯೂ ಖಾಸಗಿ ಶಾಲೆಗಳಲ್ಲಿ ಮುನ್ನಡೆಗೆ ಅಲ್ಲಿನ ನಿರಂತರ ಪಾಠಬೋಧನೆಯಿಂದಾಗಿ ಶಿಸ್ತುಪಾಲನೆ, ಸಂರಕ್ಷಣೆಗಳಿಂದಾಗಿ ಮುನ್ನಡೆ ಸಾಧಿಸುತ್ತಿವೆ ಇದು ಸಹ ಒಳ್ಳೆಯ ಬೆಳವಣಿಗೆಯಾಗಿದೆ ಎಂದರು.

"ಶಿಕ್ಷಕರು ಪ್ರಾಚೀನ ವಿದ್ಯೆಯೊಂದಿಗೆ ಆಧುನಿಕ ತಂತ್ರಜ್ಞಾನ ಮತ್ತು ವಿಜ್ಞಾನದ ಅಧ್ಯಯನದಲ್ಲಿ ಪರಿಣತರಾಗಬೇಕು. ನಿಮ್ಮ ಹಿಡಿತವಿರುವ ವಿಷಯದ ಮೇಲೆ ಕಾಪಿರೈಟ್ ಪಡೆದು ಹಣ ಸಂಪಾದಿಸಬಹುದು. ಪ್ರಾಜೆಕ್ಟ್‌ಗಳ ಮೂಲಕ ಪೇಟೆಂಟ್‌ಗಳನ್ನು ನೀಡಿ ವಿದ್ಯಾರ್ಥಿಗಳನ್ನು ಉತ್ತೇಜಿಸಿ. ಸಾಂಪ್ರದಾಯಿಕ ಜ್ಞಾನವನ್ನು ಮುಂದುವರಿಸಿ, ಭವಿಷ್ಯದ ವ್ಯವಸ್ಥೆಗೆ ಸಜ್ಜುಗೊಳಿಸಿ ನಿಲ್ಲಬೇಕು. ಇದರಿಂದ ಸವಾಲುಗಳನ್ನು ಎದುರಿಸಲು ಸಾಧ್ಯ" ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಕ್ಷೇತ್ರ ಶಿಕ್ಷಣಾಧಿಕಾರಿ ವಿ. ರಂಗಸ್ವಾಮಿ ಶೆಟ್ಟಿ ಅವರು ಮಾತನಾಡಿ, ಸಮಾಜದಲ್ಲಿ ಗುರುಗಳಿಗೆ ಅತ್ಯಂತ ಗೌರವ ಸ್ಥಾನವಿದೆ "ಶಿಕ್ಷಕರು ತಮ್ಮ ಪ್ರತಿಭೆಗಳನ್ನು ಹೆಚ್ಚಿಸಿಕೊಂಡು ಪರಿಣಾಮಕಾರಿ ಬೋಧನೆ ನಡೆಸಬೇಕು. ಎಸ್ ಆರ್‌ಜಿ ಫೌಂಡೇಶನ್‌ನ ಸರ್ವೋತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನವು ಶ್ಲಾಘನೀಯ ಕಾರ್ಯ. ಸಮಾಜದಲ್ಲಿ ಇಂತಹ ಗುರುತಿಸುವ ಕಾರ್ಯಗಳು ಹೆಚ್ಚಾಗಬೇಕು" ಎಂದು ಅವರು ಹೇಳಿದರು.

ಸಂಸ್ಥೆಯ ಕಾರ್ಯದರ್ಶಿ ಹರ್ಷಾ ಗುತ್ತೇದಾರ ಅವರು ಮಾತನಾಡಿ, ಎಸ್‌ಆರ್‌ಜಿ ಫೌಂಡೇಶನ್ ಅಡಿಯಲ್ಲಿ ನಡೆಯುವ ಶಾಲೆಗಳು ಮತ್ತು ಕಾಲೇಜುಗಳ ಮೂಲಕ ಉತ್ತಮ ಶಿಕ್ಷಣ ನೀಡುವುದು ನಮ್ಮ ಗುರಿ ಎಂದು ತಿಳಿಸಿದರು. "ಇದಕ್ಕೆಲ್ಲ ಶಿಕ್ಷಕರೇ ಮುಖ್ಯ ಕಾರಣ. ತಾಲೂಕಿನಲ್ಲಿ ಸರ್ವೋತ್ತಮ ಶಿಕ್ಷಕರನ್ನು ಆಯ್ಕೆ ಮಾಡಿ ಪ್ರಶಸ್ತಿ ನೀಡಿ ಗೌರವಿಸುವುದು ನಮ್ಮ ಸಂಸ್ಥೆಯ ಉದ್ದೇಶವಾಗಿದೆ. ಇದರ ಮೂಲಕ ಶಿಕ್ಷಣದ ಗುಣಮಟ್ಟವನ್ನು ಏರಿಸುವ ಚೇತರಿಕೆಯನ್ನು ಜಾಗೃತಗೊಳಿಸುತ್ತಿದ್ದೇವೆ" ಎಂದು ಅವರು ಹೇಳಿದರು.

ವೇದಿಕೆಯಲ್ಲಿ ಶಿಕ್ಷಣ ಪ್ರೇಮಿ ಎಂ.ಎಸ್. ಬೆಳ್ಳೆ ಉಪಸ್ಥಿತರಿದ್ದರು. ತಾಲೂಕಿನ ವಿವಿಧ ಶಾಲೆ, ಕಾಲೇಜುಗಳಿಂದ ಆಯ್ಕೆಯಾದ ಉತ್ತಮ ಶಿಕ್ಷಕರಿಗೆ ಪ್ರಶಸ್ತಿಗಳು ಮತ್ತು ಗೌರವ ಸತ್ಕಾರ ಕೈಗೊಳ್ಳಲಾಯಿತು.

ಬಿ.ಎಡ್ ಕಾಲೇಜು ಪ್ರಾಚಾರ್ಯ ಡಾ. ಅಶೋಕರೆಡ್ಡಿ ನಿರೂಪಿಸಿದರು. ಎಂಎಲ್ಆರ್‌ಜಿ ಪಿಯು ಕಾಲೇಜು ಪ್ರಾಚಾರ್ಯ ಡಾ.ಅಪ್ಪಾಸಾಬ ಬಿರಾದಾರ ಸ್ವಾಗತಿಸಿದರು. ಎಂಪಿಎಂಜಿ ಬಾಲಕಿ ಯರ ಪಿಯು ಕಾಲೇಜಿನ ಪ್ರಾಚಾರ್ಯ ಮಲ್ಲಿಕಾರ್ಜುನ ಬುಕ್ಕೆ ವಂದಿಸಿದರು.

# ಅತಿವೃಷ್ಟಿಯಿಂದ ಬೆಳೆ ಹಾನಿ ಒಳಗಾದ ಪ್ರದೇಶಗಳಿಗೆ ಭೇಟಿ:ಬಿ.ವೈ.ವಿಜಯೇಂದ್ರ



**ಕಮಲನಗರ,ಸೆ.30–** ಕಮಲನಗರ ತಾಲೂಕಿನ ಹೊಳೆಸಮುದ್ರ ಗ್ರಾಮ ಪಂಚಾಯತನಲ್ಲಿ ಬರುವ ಸಾವಳಿ ಗ್ರಾಮಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಸೋಮವಾರ ಪಕ್ಷದ ಹಿರಿಯ ನಾಯಕರೊಂದಿಗೆ ಮಳೆ ಹಾನಿಗೊಳಗಾದ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಬೆಳೆ ಹಾನಿ ಪರಿಶೀಲನೆ ನಡೆಸಲಾಯಿತು.

ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿರುವ ಬಿ.ವೈ. ವಿಜಯೇಂದ್ರ, ನೆರೆಯ ತೀವ್ರತೆ ಇಮ್ಮಡಿಗೊಂಡಿದ್ದು ಸಾಲ-ಸೋಲ ಮಾಡಿ ಬೆಳೆದಿದ್ದ ಬೆಳೆ ಕೈ ಸೇರುವ ಮುನ್ನವೇ ಸಂಪೂರ್ಣ ನಾಶವಾಗಿ. ಈ ಭಾಗದ ರೈತರು ಸಂಕಷ್ಟದಲ್ಲಿದ್ದು, ತತಕ್ಷಣವೇ ರಾಜ್ಯ ಸರ್ಕಾರ ನೆರವಿಗೆ ಧಾವಿಸಿ ಸೂಕ್ತ ಪರಿಹಾರ ಘೋಷಿಸಬೇಕೆಂದು ಆಗ್ರಹಿಸಲಾಯಿತು.

ನಾನು, ನಮ್ಮ ಎಲ್ ಒಪಿ ಛಲವಾದಿ ನಾರಾಯಣಸ್ವಾಮಿ, ನಮ್ಮ ಹಿರಿಯ ಶಾಸಕರು ಮತ್ತು ಮಾಜಿ ಸಚಿವ ಪ್ರಭು ಚೌವ್ಹಾಣ್ ಅವರೊಂದಿಗೆ ಸಂಗಮ ಮತ್ತು ಸಾವಳಿ ಪ್ರದೇಶಗಳಿಗೆ ಭೇಟಿ ನೀಡುತ್ತಿದ್ದೇವೆ. ಮಹಾರಾಷ್ಟ್ರ ಜಲಾಶಯಗಳಿಂದ ನೀರು ಬಿಡುಗಡೆ ಮಾಡಿರುವುದರಿಂದ ಭಾರೀ ಮಳೆಯಿಂದಾಗಿ ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ ಎಂದರು.

ಹಾನಿಗೊಳಗಾದ ರೈತರು ಮತ್ತು ಕುಟುಂಬಗಳಿಗೆ ತಕ್ಷಣ ಪರಿಹಾರ ಬಿಡುಗಡೆ ಮಾಡಬೇಕು ಎಂದು ವಿಜಯೇಂದ್ರ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಒತ್ತಾಯಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರವು ಸಂತ್ರಸ್ತ ರೈತರು ಮತ್ತು ಮನೆ ಕಳೆದುಕೊಂಡ ಜನರಿಗೆ ಪರಿಹಾರ ಒದಗಿಸಲು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ನಾವು ಒತ್ತಾಯಿಸುತ್ತೇವೆ. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ತೀವ್ರ ಪ್ರವಾಹ ಉಂಟಾಗಿತ್ತು ಮತ್ತು ಅವರು ಕೇಂದ್ರ ಸರ್ಕಾರದ ಹಣಕ್ಕಾಗಿ ಕಾಯ್ದೆ ಕರ್ನಾಟಕದಾದ್ಯಂತ ಪ್ರಯಾಣಿಸಿ, ತಕ್ಷಣವೇ ಪರಿಹಾರವನ್ನು ಬಿಡುಗಡೆ ಮಾಡಿದ್ದರು. ಸಿದ್ದರಾಮಯ್ಯ ಅವರು ಅದೇ ರೀತಿ ವರ್ತಿಸಬೇಕೆಂದು ನಾನು ಒತ್ತಾಯಿಸುತ್ತೇನೆ" ಎಂದು ವಿಜಯೇಂದ್ರ ಹೇಳಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ವಿರೋಧ ಪಕ್ಷ ನಾಯಕರಾದ ಚಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವರಾದ ಶ್ರೀ ಪ್ರಭು ಚೌವ್ಹಾಣ್, ರಾಜ್ಯ ಕಾರ್ಯದರ್ಶಿಗಳು ಹಾಗೂ ಶಾಸಕ ಶೈಲೇಂದ್ರ ಬೆಲ್ದಾಳೆ ಶಾಸಕ ಶರಣು ಸಲಾಗರ್, ಜಿಲ್ಲಾಧ್ಯಕ್ಷ ಸೋಮನಾಥ್ ಪಾಟೀಲ್, ಮುಖಂಡರಾದ ಪ್ರಕಾಶ್ ಖಂಡ್ರೆ, ಸೇರಿದಂತೆ ಪಕ್ಷದ ಪ್ರಮುಖರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಾದಕ ಮುಕ್ತ ಜಿಲ್ಲೆಯಾಗಲು ಎಲ್ಲರೂ ಶ್ರಮಿಸೋಣ:ಸಂಸದ ಸಾಗರ ಖಂಡ್ರೆ

**ಬೀದರ,ಸೆ.30–** ಬೀದರ ಜಿಲ್ಲೆಯನ್ನು ಮಾದಕ ಮುಕ್ತ ಜಿಲ್ಲೆಯಾಗಲು ಎಲ್ಲರೂ ಶ್ರಮಿಸೋಣ ಎಂದು ಸಂಸದ ಸಾಗರ ಖಂಡ್ರೆ ಅವರು ತಿಳಿಸಿದರು.

ಅವರು ಸೋಮವಾರ ನಗರದ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ರಾಷ್ಟ್ರೀಯ ಜೀವನೋಪಾಯ ಅಭಿಯಾನ  ಕರ್ನಾಟಕ ಹಾಗೂ ಜಿಲ್ಲಾ ಪಂಚಾಯತ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಮಾದಕ ಮುಕ್ತ ಕರ್ನಾಟಕ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



# ವಿಧಾನಸೌಧ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಆಯುಧ ಪೂಜೆ ಸಂಭ್ರಮ

**ಬೆಂಗಳೂರು, ಸೆ30–** ಆಡಳಿತದ ಶಕ್ತಿ ಕೇಂದ್ರಗಳಾದ ವಿಧಾನಸೌಧ, ವಿಕಾಸಸೌಧ, ಬಹುಮಹಡಿಗಳ ಕಟ್ಟಡ ಸೇರಿದಂತೆ ರಾಜ್ಯಾದ್ಯಂತ ಇಂದು ಬಹುತೇಕ ಸರ್ಕಾರಿ ಕಚೇರಿ ಗಳಲ್ಲಿ ಆಯುಧ ಪೂಜೆಯನ್ನು ಸಂಭ್ರಮ ಸಡಗರದಿಂದ ನೆರವೇರಿಸಲಾಯಿತು.

ಸರ್ಕಾರಿ ಕಚೇರಿಗಳಲ್ಲದೇ ಖಾಸಗಿ ಸಂಸ್ಥೆಗಳ ಕಚೇರಿಗಳು, ಕೈಗಾರಿಕೆಗಳು, ಅಂಗಡಿ–ಮುಂಗಟ್ಟುಗಳಲ್ಲಿ ಇಂದು ಆಯುಧ ಪೂಜೆಯನ್ನು ಮಾಡಲಾಯಿತು.ವಿಧಾನಸೌಧ, ವಿಕಾಸಸೌಧದ ವಿವಿಧ ಕಚೇರಿಗಳನ್ನು ತಳಿರು–ತೋರಣಗಳಿಂದ ಸಿಂಗರಿಸಿ, ಕಚೇರಿ ಮುಂದೆ ರಂಗೋಲಿ ಬಿಡಿಸಿ ವಿಶೇಷವಾಗಿ ಅಲಂಕರಿಸಲಾಗಿತ್ತು.

ಅದೇ ರೀತಿ ರಾಜ್ಯದ ವಿವಿಧ ಸರ್ಕಾರಿ ಕಚೇರಿಗಳು, ಖಾಸಗಿ ಸಂಸ್ಥೆಗಳಲ್ಲೂ ಕೂಡ ಅಲಂಕರಿಸಿ ಆಯುಧ ಪೂಜೆಯನ್ನು ನೆರವೇರಿಸಲಾಯಿತು. ನಾಳೆ ಮತ್ತು ಗುರುವಾರ ರಜೆಯಿರುವ ಹಿನ್ನೆಲೆಯಲ್ಲಿ ಬಹುತೇಕ ಎಲ್ಲಾ ವಾಣಿಜ್ಯ ವ್ಯವಹಾರ ನಡೆಸುವ ಕಚೇರಿಗಳಲ್ಲೂ ಪೂಜೆ ಮಾಡಲಾಯಿತು.

ವಿಧಾನಸೌಧದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ವಿರೋಧಪಕ್ಷದ ನಾಯಕ ಆರ್.ಅಶೋಕ್ ಕಚೇರಿಗಳು ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಕಚೇರಿಗಳು, ಸರ್ಕಾರದ



ಉನ್ನತ ಅಧಿಕಾರಿಗಳ ಕಚೇರಿಗಳನ್ನೂ ವಿಶೇಷವಾಗಿ ಅಲಂಕರಿಸಿ ಆಯುಧ ಪೂಜೆ ಮಾಡಲಾಯಿತು.

ಪರಸ್ಪರ ಸಿಹಿ ಹಂಚಿ ಆಯುಧ ಪೂಜೆ, ವಿಜಯದಶಮಿಯ ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳುತ್ತಿದ್ದುದು ಸಾಮಾನ್ಯವಾಗಿ ಕಂಡುಬಂದಿತು.ಹೀಗಾಗಿ ಬಹುತೇಕ ಕಚೇರಿಗಳಲ್ಲಿ ದೈನಂದಿನ ಕೆಲಸ ಕಾರ್ಯಗಳಿಗಿಂತ ಹಬ್ಬದ ಸಡಗರ–ಸಂಭ್ರಮವೇ ಹೆಚ್ಚಾಗಿತ್ತು. ಅದೇ ರೀತಿ ರಾಜ್ಯದ ವಿವಿಧ ಸರ್ಕಾರಿ ಕಚೇರಿಗಳು, ಖಾಸಗಿ ಕಾರ್ಖಾನೆ–ಸಂಸ್ಥೆಗಳ ಕಚೇರಿಗಳಲ್ಲೂ ಹಬ್ಬದ ಸಂಭ್ರಮ ಮನೆ ಮಾಡಿತ್ತು.

# ಕಲ್ಯಾಣ ಕರ್ನಾಟಕ ಪ್ರವಾಹ : ವೈಮಾನಿಕ ಸಮೀಕ್ಷೆ ನಡೆಸಿದ ಸಿಎಂ ಸಿದ್ದರಾಮಯ್ಯ

**ಬೆಂಗಳೂರು, ಸೆ.30–** ಮಹಾರಾಷ್ಟ್ರದಲ್ಲಿ ಭಾರಿ ಮಳೆಯಿಂದಾಗಿ ಉತ್ತರ ಕರ್ನಾಟಕ ಭಾಗದ 6–7 ಜಿಲ್ಲೆಗಳು ಜಲಾವೃತವಾಗಿದ್ದು, ಭಾರೀ ಪ್ರಮಾಣದ ನಷ್ಟ ಸಂಭವಿಸಿದೆ. ಪರಿಹಾರ ಕಾರ್ಯಗಳಿಗೆ ತತ್ವಾರ ಎದುರಾಗಿದೆ. ಗಡಿ ಜಿಲ್ಲೆಗಳಾದ ಬೆಳಗಾವಿ, ಬೀದರ್, ಕಲಬುರಗಿ, ಯಾದಗಿರಿ, ವಿಜಯಪುರ, ಬಾಗಲಕೋಟೆಗಳಲ್ಲಿ ಜಲ ಪ್ರಳಯದಿಂದಾಗಿ ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ.

ರಸ್ತೆ ಸಂಪರ್ಕ ಕಡಿತಗೊಂಡಿದ್ದು, ಗ್ರಾಮಗಳು ಜಲ ದಿಗ್ಬಂಧನಕ್ಕೊಳಗೊಂಡಿವೆ. ಊರು ಕೆರೆಯಂತಾಗಿದ್ದು, ಸುಮಾರು 50 ಸಾವಿರಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದೆ. ಮನೆಯಲ್ಲಿದ್ದ ದವಸ ಧಾನ್ಯಗಳು, ಎಲೆಕ್ಟ್ರಾನಿಕ್ ಸಲಕರಣೆಗಳು ನೀರಿನಿಂದ ಹಾನಿಗೊಳಗಾಗಿವೆ.

ಕಳೆದ ನಾಲ್ಕೈದು ದಿನಗಳಿಂದಲೂ ನೆರೆ ಹಾವಳಿ ನಿರಂತರವಾಗಿದೆ. ಭೀಮಾ ನದಿ ಪಾತ್ರದಲ್ಲಿ ಜನ ಪರದಾಡುವಂತಾಗಿದೆ. ಜೊತೆಗೆ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ, ಪರಿಹಾರ ಕಾರ್ಯಗಳಿಗೂ ಕಷ್ಟವಾಗಿದೆ. ಬೆಳೆಗಳು ಪ್ರವಾಹದಲ್ಲಿ ಕೊಚ್ಚಿ ಹೋಗಿವೆ. ಇನ್ನೂ ಕೆಲವು ಕಡೆ ನೀರು ನಿಂತು ಕೊಳೆಯಲಾರಂಭಿಸಿವೆ. ರಸ್ತೆ ಸೇತುವೆಗಳು ಹಾನಿಗೊಳಗಾಗಿವೆ. ಜಿಲ್ಲಾಡಳಿತಗಳು ಪುನರ್ವಸತಿ ಕೇಂದ್ರಗಳನ್ನು ತೆರೆದು ಜನರಿಗೆ ನೀರು, ಆಹಾರ, ವೈದ್ಯಕೀಯ ನೆರವು ಒದಗಿಸುತ್ತಿವೆ. ಶಾಲಾ ಕಾಲೇಜುಗಳಿಗೆ ರಜೆ ನೀಡಲಾಗಿದೆ.

ಮಹಾರಾಷ್ಟ್ರದ ಜಲಾಶಯಗಳಿಂದ ಲಕ್ಷಾಂತರ ಕ್ಯೂಸೆಕ್ಸ್ ನೀರನ್ನು ಹರಿಯ ಬಿಟ್ಟಿರುವುದರಿಂದಾಗಿ ಮತ್ತಷ್ಟು ಪ್ರವಾಹಪರಿಸ್ಥಿತಿ ಎದುರಾಗಿದೆ. ಜನ ಜಾನುವಾರುಗಳ ಪ್ರಾಣ ರಕ್ಷಣೆಗೆ ಸವಾಲಿನ ಪರಿಸ್ಥಿತಿ ನಿರ್ಮಾಣವಾಗಿದೆ.



**ಮುಖ್ಯಮಂತ್ರಿಯಿಂದ ಸಮೀಕ್ಷೆ:** ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ನೆರೆಬಾಧಿತ ಪ್ರದೇಶಗಳಲ್ಲಿ ವೈಮಾನಿಕ ಸಮೀಕ್ಷೆ ನಡೆಸಿದ್ದು, ಮಧ್ಯಾಹ್ನ ಕಲಬುರಗಿಯಲ್ಲಿ ಯಾದಗಿರಿ, ವಿಜಯಪುರ, ಕಲಬುರಗಿ, ಬೀದರ್ ಜಿಲ್ಲೆಗಳ ಜಿಲ್ಲಾಡಳಿತಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ.

ವೈಮಾನಿಕ ಸಮೀಕ್ಷೆಯಲ್ಲಿ ಕಂದಾಯ ಸಚಿವ ಕೃಷ್ಣಭೈರೇಗೌಡ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ ಖರ್ಗೆ, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಸೇರಿದಂತೆ ಹಲವು ಸಚಿವರು ಉಪಸ್ಥಿತರಿದ್ದರು.

ನೆರೆ ಸಂತ್ರಸ್ಥ ಪ್ರದೇಶಗಳಿಗೆ ರಾಜ್ಯಸರ್ಕಾರವೇ ತ್ವರಿತ ಸ್ಪಂದನೆ ನೀಡಿದ್ದು, ಮತ್ತಷ್ಟು ಸಹಾಯಕ್ಕಾಗಿ ಜನ ಯಾಚಿಸುತ್ತಿದ್ದಾರೆ. ಮಹಾರಾಷ್ಟ್ರ ಸರ್ಕಾರ ಏಕಾಏಕಿ ಹೆಚ್ಚುವರಿ ನೀರು ಹರಿಯ ಬಿಟ್ಟಿರುವುದರಿಂದ ಕರ್ನಾಟಕದಲ್ಲಿ ಸಮಸ್ಯೆಗಳಾಗುತ್ತಿವೆ ಎಂಬ ಅಸಮಾಧಾನ ನಾಯಕರಿಂದ ಕೇಳಿ ಬರುತ್ತಿವೆ.

# ತಿಮರೋಡಿ ಗಡೀಪಾರಿಗೆ ಹೈಕೋರ್ಟ್ ತಡೆಯಾಜ್ಞೆ

**ಬೆಂಗಳೂರು. ಸೆ.30–** ಶ್ರೀ ಕ್ಷೇತ್ರ ಧರ್ಮಸ್ಥಳ ವಿರುದ್ಧ ಹಾಗೂ ನಿಗೂಢವಾಗಿ ಕೊಲೆಯಾದ ವಿದ್ಯಾರ್ಥಿನಿ ಸೌಜನ್ಯ ಪರ ಹೋರಾಟ ನಡೆಸುತ್ತಿದ್ದ ಮಹೇಶ್ ತಿಮರೋಡಿ ಗಡಿಪಾರಿಗೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ.

ತಮನ್ನು ರಾಯಚೂರು ಜಿಲ್ಲೆ ಮಾನ್ವಿ ತಾಲ್ಲೂಕಿಗೆ ಗಡಿಪಾರು ಮಾಡಿರುವುದನ್ನು ಪ್ರಶ್ನಿಸಿ ತಿಮರೋಡಿ ಪರ ವಕೀಲರು ಹೈಕೋರ್ಟ್‌ಗೆ ಮೇಲನವಿ ಅರ್ಜಿ ಸಲ್ಲಿಸಿದ್ದರು. ವಾದ–ಪ್ರತಿವಾದ ಆಲಿಸಿದ ಹೈಕೋರ್ಟ್ ರಜಾಕಾಲೀನ ಏಕಸದಸ್ಯ ಪೀಠದ ನ್ಯಾಯಮೂರ್ತಿ ಸಿ.ಎಂ.ಪೂಣಚ್ಚ ಅವರು ಗಡಿಪಾರಿಗೆ ತಡೆಯಾಜ್ಞೆ ನೀಡಿ ಆರೋಪಿ ವಿರುದ್ಧ ಯಾವುದೇ ರೀತಿಯ ಬಲವಂತದ ಕ್ರಮ ಬೇಡ ಎಂದು ನಿರ್ದೇಶನ ನೀಡಿತು.ಮುಂದಿನ ಅ.8ರವರೆಗೆ ಗಡಿಪಾರು ಮಾಡದಂತೆ ಸೂಚನೆ ನೀಡಿದ ನ್ಯಾಯಾಧೀಶರು ರಾಜ್ಯ ಗೃಹ ಇಲಾಖೆ ಪುತ್ತೂರು ಸಹಾಯಕ ಆಯುಕ್ತರು, ಭಂಟ್ವಾಳ ಉಪವಿಭಾಗದ ಉಪಪೊಲೀಸ್ ವರಿಷ್ಠಾಧಿಕಾರಿ ಮತ್ತು ಬೆಳ್ತಂಗಡಿ ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ಅವರಿಗೂ ನೋಟಿಸ್ ಜಾರಿ ಮಾಡಿದೆ.ತಮ ವಿರುದ್ಧ ಹೊರಡಿಸಿರು ಗಡಿಪಾರು ಆದೇಶವನ್ನು ರದ್ದುಪಡಿಸಬೇಕು. ಅರ್ಜಿ ಇತ್ಯರ್ಥವಾಗುವವರೆಗೂ ಆದೇಶ ಜಾರಿಗೆ ತಡೆ ನೀಡುವಂತೆ ತಿಮರೋಡಿ ಪರ ವಕೀಲರು ಮನವಿ ಮಾಡಿಕೊಂಡಿದ್ದರು.

**ಪ್ರಕರಣದ ಹಿನ್ನಲೆ:** ಧರ್ಮಸ್ಥಳದ ಬುರುಡೆ ಪ್ರಕರಣ ಹಾಗೂ ಸೌಜನ್ಯ ಪ್ರಕರಣದಲ್ಲಿ ಹೋರಾಟ ನಡೆಸುತ್ತಿದ್ದ ಸಾಮಾಜಿಕ ಹೋರಾಟಗಾರ ಮಹೇಶ್ ಶೆಟ್ಟಿ ತಿಮರೋಡಿಯನ್ನು ಮಂಗಳೂರಿನಿಂದ ಗಡಿಪಾರು ಮಾಡಿ ಸಹಾಯಕ ಆಯುಕ್ತ ಸ್ಟೆಲ್ಲಾ ವರ್ಗೀಸ್ ಆದೇಶ ಹೊರಡಿಸಿದ್ದರು.ಮಹೇಶ್ ತಿಮರೋಡಿ ವಿರುದ್ಧ ಸುಮಾರು 32 ವಿವಿಧ ಪ್ರಕರಣಗಳು ದಾಖಲಾಗಿದ್ದವು. ಹೀಗಾಗಿ ಮಹೇಶ್ ಶೆಟ್ಟಿ ತಿಮರೋಡಿಯನ್ನು ಗಡಿಪಾರು ಮಾಡುವಂತೆ ಆಗ್ರಹಗಳು ವ್ಯಕ್ತವಾಗಿದ್ದವು. ಮಂಗಳೂರಿನಿಂದ ರಾಯಚೂರಿನ ಮಾನ್ವಿ ತಾಲೂಕಿಗೆ ಮಹೇಶ್ ಶೆಟ್ಟಿ ತಿಮರೋಡಿಯನ್ನು ಒಂದು ವರ್ಷಗಳ ಕಾಲ ಗಡಿಪಾರು ಮಾಡಲಾಗಿತ್ತು.ಪೊಲೀಸರು ಅಥವಾ ನ್ಯಾಯಾಲಯದ ಸೂಚನೆಗಳು ಅಗತ್ಯವಿದ್ದಾಗ ಮಾತ್ರ ತಿಮರೋಡಿ ಈ ಜಿಲ್ಲೆಯನ್ನು ಪ್ರವೇಶಿಸಬಹುದು. ಪೊಲೀಸರ ಪರವಾಗಿ ಬಂಟ್ವಾಳ ಉಪ ಪೊಲೀಸ್ ವರಿಷ್ಠಾಧಿಕಾರಿಮತ್ತು ತಿಮರೋಡಿ ಪರ ವಕೀಲರು ಈ ವಿಷಯಕ್ಕೆ ಕಾನೂನು ಪ್ರಾತಿನಿಧ್ಯವನ್ನು ಒದಗಿಸಿದ್ದು ಅಗತ್ಯವಿದ್ದರೆ ತಿಮರೋಡಿ ಸರ್ಕಾರ ಅಥವಾ ಹೈಕೋರ್ಟ್‌ನಲ್ಲಿ ವರ್ಗಾವಣೆ ಆದೇಶದ ಪುನರ್ವಿಮರ್ಶೆ ಅರ್ಜಿಯನ್ನು ಸಲ್ಲಿಸಬಹುದಾಗಿತ್ತು.

## ಆಯುಧ ಪೂಜೆ ಹಾಗೂ ವಿಜಯದಶಮಿಗೆ ಖರೀದಿ ಭರಾಟೆ ಜೋರು



**ಬೆಂಗಳೂರು,ಸೆ.30–** ಆಯುಧ ಪೂಜೆ ಹಾಗೂ ವಿಜಯದಶಮಿ ಹಬ್ಬದ ಸಂಭ್ರಮ ರಾಜ್ಯಾದ್ಯಂತ ಮನೆ ಮಾಡಿದ್ದು, ಅಗತ್ಯ ವಸ್ತುಗಳ ಖರೀದಿ ಭರಾಟೆ ಜೋರಾಗಿದೆ.ಆಯುಧ ಪೂಜೆ ದಿನವಾದ ನಾಳೆ ಹಾಗೂ ವಿಜಯದಶಮಿ ಹಿನ್ನೆಲೆಯಲ್ಲಿ ಗುರುವಾರ ಸರ್ಕಾರಿ ರಜೆ ಇರುವುದರಿಂದ ಕೆಲವು ಕಚೇರಿಗಳು, ವ್ಯಾಪಾರ ಮಳಿಗೆಗಳು, ಗೋದಾಮು, ಕಾರ್ಖಾನೆಗಳಲ್ಲಿ ಇಂದೇ ಪೂಜೆ ನೆರವೇರಿಸಲಾಗಿದ್ದು, ಹೀಗಾಗಿ ಎರಡು ದಿನಗಳ ಮುಂಚಿತವಾಗಿಯೇ ಜನರು ಮಾರುಕಟ್ಟೆಯಲ್ಲಿ ಹಬ್ಬಕ್ಕೆ ಬೇಕಾದ ವಸ್ತುಗಳ ಖರೀದಿಗೆ ಮುಗಿಬಿದ್ದಿದ್ದ ದೃಶ್ಯಗಳು ಕಂಡುಬಂದವು.

ನಗರದ ಕೆ.ಆರ್.ಮಾರುಕಟ್ಟೆ, ಮಲ್ಲೇಶ್ವರಂ, ಯಶವಂತಪುರ, ಗಾಂಧಿಬಜಾರ್, ವಿಜಯನಗರ, ಉಲ್ಲಾಳ ಮುಖ್ಯರಸ್ತೆ, ಮಹಾಲಕ್ಷ್ಮಿ ಲೇ ಔಟ್, ರಾಜಾಜಿನಗರ ಸೇರಿದಂತೆ ವಿವಿಧ ಮಾರುಕಟ್ಟೆಗಳಲ್ಲಿ ಹೂ–ಹಣ್ಣು, ಬಾಳೆಕಂದು, ನಿಂಬೆಹಣ್ಣು, ಬೂದುಕುಂಬಳಕಾಯಿ, ಕಡ್ಲೆಪುರಿ, ಸಿಹಿ ಪದಾರ್ಥಗಳ ಮಾರಾಟ ದೃಶ್ಯಗಳು ಕಂಡುಬಂದವು. ವಾಹನಗಳಿಗೆ ಹಾಗೂ ಕಾರ್ಖಾನೆಗಳ ಯಂತ್ರೋಪಕರಣಗಳಿಗೆ ಹೆಚ್ಚಾಗಿ ಬಳಕೆಯಾಗುವ ಬೂದುಕುಂಬಳಕಾಯಿ ಬೆಲೆ ಹೆಚ್ಚಾಗಿದ್ದು, ಸಗಟು ದರದಲ್ಲಿ ಕೆಜಿಗೆ 25 ರೂ.ಗಳಿಂದ 30 ರೂ.ಗೆ ಮಾರಾಟವಾಗುತ್ತಿದ್ದರೆ, ಚಿಲ್ಲರೆಯಾಗಿ ಕೆಜಿಗೆ 40 ರಿಂದ 60 ರೂ. ಮಾರಾಟ ಮಾಡಲಾಗುತ್ತಿದೆ. ಇನ್ನೂ ಹಲವೆಡೆ ಗಾತ್ರಕ್ಕೆ ತಕ್ಕಂತೆ ಬೆಲೆ ನಿಗದಿ ಮಾಡಲಾಗಿದೆ.

ತಮಿಳುನಾಡು, ಆಂಧ್ರಪ್ರದೇಶ ಹಾಗೂ ರಾಜ್ಯದ ವಿವಿಧೆಡೆಯಿಂದ ಲೋಡ್‌ಗಟ್ಟಲೆ ಬೂದುಕುಂಬಳಕಾಯಿ ಬಂದಿದೆ. ಬೇಡಿಕೆ ಹೆಚ್ಚಾದ್ದರಿಂದ ಬೆಲೆಯೂ ಸಹ ಹೆಚ್ಚಳವಾಗಿದೆ. ಹಬ್ಬಗಳ ಸಂದರ್ಭದಲ್ಲಿ ಹೂಗಳ ಬೆಲೆ ಸಾಮಾನ್ಯವಾಗಿ ಹೆಚ್ಚಾಗಿರುತ್ತದೆ. ಸೇವಂತಿ ಮಾರು 150 ರೂ., ಕೆಜಿಗೆ 200 ರೂ. ಚೆಂಡು ಹೂವಿನ ಬೆಲೆಯೂ ಸಹ ತುಸು ಏರಿಕೆಯಾಗಿದ್ದು, ಕೆಜಿಗೆ 50 ರೂ.ಗಳಿಂದ 60 ರೂ. , ಮಲ್ಲಿಗೆ 400 ರೂ.ಗಳಿಂದ 800 ರೂ., ಗುಲಾಬಿ 300 ರೂ., ಕನಕಾಂಬರ 1000 ರೂ., ಸುಗಂಧರಾಜ 300 ರೂ.ಗಳಿಗೆ ಮಾರಾಟವಾಗುತ್ತಿದೆ.ಹಣ್ಣುಗಳ ಬೆಲೆಯೂ ಏರಿಕೆಯಾಗಿದ್ದು, ದಾಳಿಂಬೆ 150 ರೂ., ಸೇಬು 150 ರೂ.ಗಳಿಂದ 200, ಮೂಸಂಬೆ 80 ರಿಂದ 100, ಏಲಕ್ಕಿ ಬಾಳೆ 120 ರೂ., ಪಚ್ಚಬಾಳೆ 50 ರೂ.ಗಳಿಗೆ ಮಾರಾಟವಾಗುತ್ತಿದ್ದರೆ, ಜೋಡಿ ಬಾಳೆಕಂದು ಗಾತ್ರಕ್ಕೆ ತಕ್ಕಂತೆ 50 ರೂ.ಗಳಿಂದ 500 ರೂ.ಗಳವರೆಗೆ ಮಾರಾಟ ಮಾಡಲಾಗುತ್ತಿದೆ.

# ಸಮೀಕ್ಷೆ ಮೂಲಕ ಗ್ಯಾರಂಟಿಗಳನ್ನು ನಿಲ್ಲಿಸಲು ಸರ್ಕಾರ ಸಂಚು : ಆರ್.ಅಶೋಕ್

**ಬೆಂಗಳೂರು,ಸೆ.30–** ಹಿಂದುಳಿದ ವರ್ಗಗಳ ಶಾಶ್ವತ ಆಯೋಗದಿಂದ ರಾಜ್ಯಾದ್ಯಂತ ನಡೆಸುತ್ತಿರುವ ಸಾಮಾಜಿಕ ಹಾಗೂ ಶೈಕ್ಷಣಿಕಯ ಉದ್ದೇಶವೇ ಗ್ಯಾರಂಟಿಗಳನ್ನು ಕಡಿತ ಮಾಡುವ ಏಕೈಕ ಗುರಿಯಾಗಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಮತ್ತೆ ಸರ್ಕಾರದ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಈ ಹಿಂದೆ ನೀಡಿದ ಹೇಳಿಕೆಗೆ ಬದ್ಧನಾಗಿದ್ದೇನೆ. ಶೈಕ್ಷಣಿಕ, ಸಾಮಾಜಿಕ ಸಮೀಕ್ಷೆ ಮೂಲಕ ಗ್ಯಾರಂಟಿಗಳನ್ನು ಬಂದ್ ಮಾಡಲು ಸಂಚು ರೂಪಿಸಿದ್ದಾರೆ. ಮುಂದಿನ ದಿನಗಳಲ್ಲಿ ಇದು ಜನರಿಗೆ ಗೊತ್ತಾಗಲಿದೆ ಎಂದು ಎಚ್ಚರಿಸಿದರು.ಮಾಹಿತಿ ಪಡೆಯಲು ಬಲವಂತ ಮಾಡುವಂತಿಲ್ಲ ಎಂದು ಕೋರ್ಟ್ ಹೇಳಿದೆ. ಆದರೆ ಇವರು ಜನರ ವೈಯಕ್ತಿಕ ಮಾಹಿತಿ ಸಂಗ್ರಹ ಮಾಡುತ್ತಿದ್ದಾರೆ. ನ್ಯಾಯಾಲಯ ಹೇಳಿದಂತೆ ಸಮೀಕ್ಷೆ ನಡೆಯುತ್ತಿಲ್ಲ. ಇದು ಸಿದ್ದರಾಮಯ್ಯ ಅವರ ಸಮೀಕ್ಷೆ. ಗ್ಯಾರಂಟಿಗಳನ್ನು ಕಟ್ ಮಾಡಲು ಸಮೀಕ್ಷೆ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.ಯಾವ ಪುರುಷಾರ್ಥಕ್ಕೆ ಹದಿನೈದೇ ದಿನ ನಿಗಧಿ ಮಾಡಿದ್ದೀರಿ? ತರಬೇತಿ ಕೊಡದೇ ಸಮೀಕ್ಷೆಗೆ ಗಣತಿದಾರರನ್ನು ಕಳಿಸಿದ್ದಾರೆ. ಹದಿನೈದು ದಿನಗಳಲ್ಲಿ ಪ್ರಳಯ ಆಗುತ್ತಾ? ಕೇಂದ್ರದ ಗಣತಿಯನ್ನೂ ತಪ್ಪು ದಾರಿಗೆ ಎಳೆಯಲು ಈಗಿಂದಲೇ ಪ್ರಯತ್ನ ಮಾಡುತ್ತಿದ್ದಾರೆ. ಜಾತಿ ಜಾತಿಗಳ ನಡುವೆ ಗೊಂದಲ ಸೃಷ್ಟಿಸುತ್ತಿದ್ದಾರೆ. ದುರುದ್ದೇಶ ಸ್ವಾರ್ಥ, ದುರುಳತನ ಇರುವ ಸಮೀಕ್ಷೆ ಇದು ಎಂದು ಕಿಡಿಕಾರಿದರು.ಹಲವು ಜಾತಿ ಸಮುದಾಯಗಳು ಸಮೀಕ್ಷೆ ಅವೈಜ್ಞಾನಿಕ ಎನ್ನುತಿವೆ. ಸಮೀಕ್ಷೆಯಲ್ಲಿ ಭಾಗವಹಿಸುವುದು, ಬಿಡುವುದು ಜನರ ವಿವೇಚನೆಗೆ ಬಿಟ್ಟ ವಿಚಾರ. ಕೋರ್ಟ್ ಕೂಡ ಕಡ್ಡಾಯವಲ್ಲ ಎಂದೇ ಹೇಳಿದೆ. ಕೇಂದ್ರ ಸರ್ಕಾರ ಜಾತಿ ಗಣತಿ ಮಾಡುತ್ತಿರುವುದು ಸಂವಿಧಾನದ ಪ್ರಕಾರ. ಆದರೆ ರಾಜ್ಯ ಸರ್ಕಾರ ಮಾಡುತ್ತಿರುವುದು ಸಂವಿಧಾನ ಪ್ರಕಾರ ಅಲ್ಲ. ತೇಜಸ್ವಿ ಸೂರ್ಯ ಅವರು ತಮ ವೈಯಕ್ತಿಕ ಹೇಳಿಕೆ ನೀಡಿದ್ದಾರೆ.

ಕೋರ್ಟ್ ಪ್ರಕಾರ, ಇಷ್ಟವಿದ್ದರೆ ಮಾಹಿತಿ ಕೊಡಬಹುದು ಇಲ್ಲದಿದ್ದರೂ ಬಿಡಬಹುದು. ವೈಯಕ್ತಿಕ ಮಾಹಿತಿ ಕೊಡುವುದು, ಬಿಡುವುದು ಜನರ ತೀರ್ಮಾನ. ಎಲ್ಲ ಮಾಹಿತಿ ಕೊಟ್ಟರೆ ಸರ್ಕಾರದ ಸೌಲಭ್ಯಕ್ಕೆ ಕೊಕ್ ಬೀಳಬಹುದು.ಸಿದ್ದರಾಮಯ್ಯನವರದ್ದು ಜಾತಿ ಒಡೆಯುವ ಬ್ರಾಂಡ್. 15 ದಿನದಲ್ಲೆ? ಸರ್ವೆ ಮಾಡಬೇಕು ಎನ್ನುವ ಆತುರ ಏಕೆ ? 15 ದಿನದಲ್ಲಿ ಸಿಎಂ ಬಿಟ್ಟೋಗುತ್ತಾರಾ? ತರಬೇತಿ ಇಲ್ಲದೇ ಸರ್ವೆಗೆ ಹೋಗುತ್ತಿದ್ದಾರೆ. ನಾಯಿಯಿಂದ ಕಚ್ಚಿಸಿಕೊಂಡು ಬರಲು ಸರ್ವೆಗೆ ಹೋಗಬೇಕಾ ? ಎಂದು ಪ್ರಶ್ನಿಸಿದರು.ಅಂತೂ ಇಂತೂ ಸಿಎಂ



ನೆರೆ ಪೀಡಿತ ಪ್ರದೇಶಗಳಿಗೆ ಹೋಗುತ್ತಿರುವುದು ಸಂತೋಷ. ಆದರೆ ವೈಮಾನಿಕ ಸಮೀಕ್ಷೆ ಯಾಕೆ? ಯಾಕೆ ರಸ್ತೆ ಮೇಲೆ ಸಿಎಂ ಹೋಗುತ್ತಿಲ್ಲ? ಸಿಎಂ ಏನು ದೆಹಲಿಯಿಂದಲೋ ಮುಂಬೈಯಿಂದಲೋ ಬರುತ್ತಿದ್ದಾರಾ? ರಸ್ತೆಗಳಲ್ಲಿ ರಸ್ತೆಗುಂಡಿಗಳಿವೆ ಅದಕ್ಕೆ? ಸಿಎಂ ರಸ್ತೆ ಮಾರ್ಗದಲ್ಲಿ ನೆರೆಪೀಡಿತ ಪ್ರದೇಶಗಳ ಭೇಟಿ ಮಾಡುತ್ತಿಲ್ಲ. ರಸ್ತೆ ಮಾರ್ಗದಲ್ಲಿ ಹೋದರೆ ಜನ ಘೆರಾವ್ ಹಾಕುತ್ತಾರೆ ಎಂದು ಭಯದಿಂದ ವೈಮಾನಿಕ ಸಮೀಕ್ಷೆ ಮಾಡುತ್ತಿದ್ದಾರೆಸರ್ಕಾರ ನೆರೆ ಪರಿಹಾರ ಕಾರ್ಯಗಳನ್ನು ಸಮರೋಪಾದಿಯಲ್ಲಿ ಮಾಡಬೇಕಿತ್ತು. ಮಂತ್ರಿಗಳ, ಅಧಿಕಾರಿಗಳ ಒಂದು ತಂಡ ರಚಿಸಿ ಕಳಿಸಬೇಕಿತ್ತು. ಆದ್ರೆ ಇದುವರೆಗೆ ಒಬ್ಬೊಬ್ಬ ಮಂತ್ರಿ ನೆರೆ ಪ್ರದೇಶಗಳ ಕಡೆ ಸುಳಿದಿಲ್ಲ. ಇದು ಯಾವ ಸೀಮೆ ಸರ್ಕಾರ ಎಂದು ಜನರೇ ಪ್ರಶ್ನಿಸುತ್ತಿದ್ದಾರೆ. ನೆರೆ ಪರಿಸ್ಥಿತಿ ನಿಭಾಯಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ದೂರಿದರು.

ಸಚಿವ ಸಂಪುಟ ಪುನಾರಚನೆ ಬಗ್ಗೆ ಸಚಿವ ಜಮೀರ್ ಅಹಮದ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅಶೋಕ್, ಇದು ತಂತ್ರ ಇಲ್ಲದೇ ನಡೀತಿರುವ ಅತಂತ್ರ ಸರ್ಕಾರ. ಜಮೀರ್ ಹೇಳಿಕೆ ಅಕ್ಟೋಬರ್ ಕ್ರಾಂತಿ ಆಗುವುದರ ಸುಳಿವುಒಬ್ಬೊಬ್ಬರು ಒಂದೊಂದು ಹೇಳಿಕೆ ಕೊಡುತ್ತಿದ್ದಾರೆ. ಅಕ್ಟೋಬರ್ ಕ್ರಾಂತಿ ಆಗುವುದು ಪಕ್ಕಾ. ಕ್ರಾಂತಿ ಬಗ್ಗೆ ಮಾತನಾಡಲು ಹೋಗುತ್ತಿದ್ದಾರೆ. ರಾಜಣ್ಣ ವಜಾ ಆದರು. ಒಟ್ಟಿನಲ್ಲಿ ಅಕ್ಟೋಬರ್ ಕ್ರಾಂತಿ ಆಗುವುದು ಖಚಿತ . ಅಕ್ಟೋಬರ್ ಕ್ರಾಂತಿ ಆಗಿ ಸರ್ಕಾರ ಬಿದ್ದು ಹೋದರೆ ನಾವು ಪ್ರಜಾಪ್ರಭುತ್ವ ಮಾದರಿಯಲ್ಲಿ ಚುನಾವಣೆಗೆ ಹೋಗುತ್ತೆ?ವೆ ಎಂದರು.ಸಿಎಂ ಬದಲಾವಣೆ ಬಗ್ಗೆ ಕಾಂಗ್ರೆಸ್ ಸಚಿವರೇ ಹೇಳುತ್ತಿದ್ದಾರೆ. ಇದು ಅಸ್ಥಿರ ಸರ್ಕಾರ. ನಾವು ನಾಲ್ಕೈದು ತಿಂಗಳಿನಿಂದ ಅಕ್ಟೋಬರ್ ಕ್ರಾಂತಿ ಬಗ್ಗೆ ಹೇಳುತ್ತಿದ್ದೆವು. ಈಗ ಮಂತ್ರಿಯೇ ಕ್ಯಾಬಿನೆಟ್ ಪುನರ್ ರಚನೆ ಎಂದು ಹೇಳಿದ್ದಾರೆ. ಪುನರ್ ರಚನೆ ಅಂದರೆ ಮುಖ್ಯಮಂತ್ರಿಯೂ ಸೇರಿ ಬದಲಾಗುತ್ತಾರೆ, ಅಕ್ಟೋಬರ್ ಕ್ರಾಂತಿ ಎಂದ ಕಾಂಗ್ರೆಸ್ ನಾಯಕರು ಮನೆಗೆ ಹೋಗಿದ್ದಾರೆ. ಈಗ ಹೇಳುತ್ತಿರುವವರೂ ಮನೆಗೆ ಹೋಗುತ್ತಾರೆ ಎಂದರು.

# ನಟ ದರ್ಶನ್ ಅರ್ಜಿ : ಅ.9ಕ್ಕೆ ಆದೇಶ ಕಾಯ್ದಿರಿಸಿದ ಕೋರ್ಟ್

**ಬೆಂಗಳೂರು,ಸೆ.30–**ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿ ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ನಟ ದರ್ಶನ್ ತಮಗೆ ಬೇಕಾಗಿರುವ ವಸ್ತುಗಳನ್ನು ನೀಡದ ಜೈಲಿನ ಅಧಿಕಾರಿಗಳ ವಿರುದ್ದ ಮನವಿ ಮಾಡಿದ್ದು,ಈ ಸಂಬಂಧ ದರ್ಶನ್ ಪರ ಹಾಗೂ ಸರ್ಕಾರದ ಪರ ವಕೀಲರ ಸುದೀರ್ಘ ವಾದ–ಪ್ರತಿವಾದದ ಬಳಿಕ ಆದೇಶವನ್ನು ಕೋರ್ಟ್ ಅಕ್ಟೋಬರ್ 9ಕ್ಕೆ ಆದೇಶ ಕಾಯ್ದಿರಿಸಿದೆ.ಜೈಲಾಧಿಕಾರಿಗಳು ಕೋರ್ಟ್ ಆದೇಶ ಪಾಲಿಸಿದ ಆರೋಪದ ಹಿನ್ನೆಲೆಯಲ್ಲಿ ಕೋರ್ಟ್ ನಲ್ಲಿ ಕೊಲೆ ಆರೋಪಿ ದರ್ಶನ್ ಸಲ್ಲಿಸಿದ ಅರ್ಜಿ ವಿಚಾರಣೆಯು 57ನೇ ಸೇಷನ್ಸ್ ನ್ಯಾಯಾಲಯದಲ್ಲಿ ಇಂದು ನಡೆಯಿತು.ಕೋರ್ಟ್ ಗೆ ಖುದ್ದು ಹಾಜರಾದ ಜೈಲು ಅಧಿಕ್ಷಕ ಸುರೇಶ್ ಕೋರ್ಟಿಗೆ ಹಾಜರಾದರು. ಈ ವೇಳೆ ಜೈಲು ಅಧಿಕ್ಷಕ ಸಂಪೂರ್ಣ ವರದಿ ಸಲ್ಲಿಸಿ ಕ್ವಾರಂಟೈನ್ ಸೆಲ್ ನಿಂದ ಬ್ಯಾರಕ್ ಗೆ ಸ್ಥಳಾಂತರಿಸಲು ನಟ ದರ್ಶನ್ ಕೋರಿದ್ದಾರೆ. ವಾಕ್ ಮಾಡಲು ಕಡಿಮೆ ಸಮಯ ಜಾಗ ನೀಡಿದ್ದಾರೆ. ಜೈಲಾಧಿಕಾರಿಗಳು ಕೋರ್ಟ್ ಆದೇಶ ಪಾಲಿಸಿದ ಆರೋಪ ಹಿನ್ನೆಲೆಯಲ್ಲಿ ಕೋರ್ಟ್ ನಲ್ಲಿ ಇದೀಗ ಕೊಲೆ ಆರೋಪಿ ದರ್ಶನ ವಿಚಾರಣೆ ನಡೆಯಿತು.


ಇನ್ನು ಜೈಲಿನಲ್ಲಿ ಹೆಚ್ಚುವರಿ ಹಾಸಿಗೆ ದಿಂಬು ನೀಡಿದ ಆರೋಪ ವಿಚಾರಕ್ಕೆ ಸಂಬಂಧಪಟ್ಟಂತೆ ದರ್ಶನ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ಆರಂಭವಾಯಿತು. ಜೈಲು ಅಧಿಕಾರಿಗಳ ಪರವಾಗಿ ಎಸ್‌ಪಿಪಿ ಪ್ರಸನ್ನಕುಮಾರ್ ವಾದ ಆರಂಭಿಸಿದರು. ಜೈಲು ಕೈಪಿಡಿಯಂತೆ ಕ್ರಮ ಕೈಗೊಳ್ಳಲಾಗಿದೆ. ಟೆಲಿಫೋನ್ ವಿಡಿಯೋ ಕಾನ್ಫರೆನ್ಸ್ ವ್ಯವಸ್ಥೆ ಸಹ ಮಾಡಲಾಗಿದೆ. ಚಾದರ್, ಹಾಸಿಗೆ ದಿಂಬು ಕೊಡಲಾಗಿದೆ. ಪಲ್ಲಂಗ ಕೇಳಿದರೆ ಕೊಡಲು ಅವಕಾಶ ಇಲ್ಲ ಓಡಾಡಲು ಅವಕಾಶ ಕೇಳಿದರು ಅದನ್ನು ಸಹ ಕೊಟ್ಟಿದ್ದೇವೆ. ಎಷ್ಟು ಜಾಗವಿದಿಯೋ ಅಲ್ಲಿ ಅವಕಾಶ ಕೊಟ್ಟಿದ್ದೇವೆ . ಅದು ದೋಷಾರೋಪಕ್ಕಿಂತ ಮೊದಲು ನೀಡಬೇಕಾದ ವಿವರಣೆ ನೀಡಲಾಗಿದೆ. ಕ್ರಮ ಕೈಗೊಳ್ಳಲಾಗಿದೆ ಎಂದು ವಾದ ಅಂತ್ಯಗೊಳಿಸಿದರು.ಬಳಿಕ ಆರೋಪಿ ದರ್ಶನ್ ಪರವಾಗಿ ಸುನಿಲ್ ವಾದ ಆರಂಭಿಸಿದರು. ಜೈಲಾಧಿಕಾರಿಗಳಿಗೆ ಕೋರ್ಟ್ ನಿರ್ದೇಶನ ಅರ್ಥವಾಗಿಲ್ಲ ಅಧಿಕಾರಿಗಳಿಗೆ ಇಂಗ್ಲೀಷ್ ಬರುತ್ತಿಲ್ಲವೆಂದು ಕಾಣುತ್ತದೆ , ದರ್ಶನ್ ವಕೀಲರ ವಾದಕೆ ಎಸ್ ಪಿ ಪಿ ಪ್ರಸನ್ನ ಕುಮಾರ್ ತೀವ್ರ ಅಕ್ಷೇಪ ವ್ಯಕ್ತಪಡಿಸಿದರು ಇಂಗ್ಲಿಷ್ ಭಾಷೆ ಬರುತ್ತಿಲ್ಲವೆಂದೆಲ್ಲ ವಾದಿಸಬಾರದು ಘನತೆಗೆ ತಕ್ಕಂತೆ ವಾದಿಸಬೇಕು ಎಂದು ಪ್ರಸನ್ನ ಕುಮಾರ್ ಅಕ್ಷತಾ ವ್ಯಕ್ತಪಡಿಸಿದರು ಈ ವೇಳೆ ಸೌಮ್ಯ ಭಾಷೆಯಲ್ಲಿ ವಿವಾದಿಸಲು ಕೋರ್ಟ್ ಸೂಚನೆ ನೀಡಿತು.

ಕೋರ್ಟ್ ಆದೇಶದ ಪ್ರತಿಯನ್ನು ಎಸೆದಿದ್ದಾರೆ ಆರೋಪಿ ದರ್ಶನ್ ಪರ ವಕೀಲ ಸುನಿಲ್ ವಾದ ಮಂಡಿಸಿದರು ಚಿನ್ನದ ಮಂಚ ಕೇಳಿಲ್ಲ ಚಂಬುಲೋಟ ಚಾಪೆ ಕೊಟ್ಟಿದ್ದಾರೆ. ಆಗ ಸುಮ್ಮನೆ ಆರೋಪ ಮಾಡಬೇಡಿ ಆದೇಶ ಏನು ಪಾಲನೆ ಆಗಿಲ್ಲ ಹೇಳಿ ಆರೋಪಿ ದರ್ಶನ್ ಪರ ವಕೀಲರಿಗೆ ಸೂಚನೆ ಕೊಟ್ಟರು. ಕಾರ್ಪೆಟ್ ಚಾದರ್ ಮೊದಲೇ ಕೊಟ್ಟಿದ್ದರು ಕಂಬಳಿ ಮಾತ್ರ ಕೋರ್ಟ್ ಆದೇಶದ ಬಳಿಕ ಕೊಟ್ಟಿದ್ದಾರೆ ಬ್ಯಾರಕ್ ಒಳಗೆ ಮಾತ್ರ ಅರ್ಧ ಗಂಟೆ ಓಡಾಡಲು ಬಿಟ್ಟಿದ್ದಾರೆ ಹೊರಗಡೆ ಓಡಾಡಲು ಬಿಟ್ಟಿಲ್ಲ ಎಂದು ದರ್ಶನ್ ಪರ ವಕೀಲ ಸುನಿಲ್ ವಾದಿಸಿದರು.ಈ ವೇಳೆ ಜೈಲು ಅಧಿಕಾರಿಗಳಿಗೆ ಆರೋಪಿಗಳ ರಕ್ಷಣೆಯ ಹೊಣೆ ಇದೆ ಅದನ್ನು ಅವರು ಪರಿಗಣಿಸಬೇಕಲ್ಲವೇ? ಎಂದು ನ್ಯಾಯಮೂರ್ತಿ ಕೇಳಿದರು. ದರ್ಶನ್ ಗೆ ಪ್ರತ್ಯೇಕ ರಿಜಿಸ್ಟರ್ ಇಟ್ಟಿದ್ದಾರೆ. ಯಾರು ನೋಡಲು ಬರುತ್ತಾರೆ ಎಂದು ನಮೂದಿಸಬೇಕಿದೆ ಎಂದು ಆರೋಪಿ ದರ್ಶನ್ ಪರ ವಕೀಲ ಸುನಿಲ್ ಇದೆ ವೇಳೆ ತಿಳಿಸಿದರು. ಆಗ ಕಾನೂನು ಸುವ್ಯವಸ್ಥೆ ವಿಚಾರದಲ್ಲಿ ಮಧ್ಯ ಪ್ರವೇಶಿಸುವುದಿಲ್ಲ ಕಾನೂನು ಸವ್ಯವಸ್ಥೆ ಕಾಪಾಡುವುದು ಪೊಲೀಸರ ಹಣೆ ಅದನ್ನು ಗಮನದಲ್ಲಿ ಇಟ್ಟು ಅವರು ಕ್ರಮ ಕೈಗೊಳ್ಳಬಹುದು ಎಂದು ನ್ಯಾಯಮೂರ್ತಿ ತಿಳಿಸಿದರು.

ದರ್ಶನ್ ಗೆ ಕ್ವಾರಂಟೈನ್ ಸೆಲ್ ನಲ್ಲಿ ಇಟ್ಟಿದ್ದಾರೆ. ಬೇರೆ ಯಾರಿಗೂ ಈ ರೀತಿ5 ಕ್ವಾರಂಟೈನ್ ಸೆಲ್ ನಲ್ಲಿ ಇಟ್ಟಿಲ್ಲ. ದರ್ಶನ್ ಗೆ ಮಾತ್ರ ಯಾಕೆ ಕ್ವಾರಂಟೈನ್ ಸೆಲ್ ನಲ್ಲಿ ಇಟ್ಟಿದ್ದಾರೆ? ಕಾನೂನು ಅಂದ್ರೆ ಎಲ್ಲರಿಗೂ ಸಹ ಒಂದೇ ಅಲ್ವಾ? ಸೆಲೆಬ್ರಿಟಿ ರಕ್ಷಣೆಗೆ ಕ್ರಮ ಎಂದೆಲ್ಲಾ ಹೇಳುತ್ತಿದ್ದಾರೆ. ಆದರೆ ಉಗ್ರರಿಗೆ ಇರಿಸುವ ಸೆಲ್ ನಲ್ಲಿ ಇಟ್ಟಿದ್ದಾರೆ ಎಂದು ದರ್ಶನ್ ಪರ ವಕೀಲ ಸುನಿಲ್ ವಾದಿಸಿದರು.ಈ ವೇಳೆ ದರ್ಶನ್ ಪರ ವಕೀಲ ಸುನೀಲ್ ಯಾವ ಕೈದಿಗೆ ಯಾವ ಸೆಲ್ ನೀಡಬೇಕು ಎಂದು ಕೈಪಿಡಿಯಲ್ಲಿದೆ. ಕೇಂದ್ರ ಸರ್ಕಾರದ ಜೈಲು ಕೈಪಿಡಿಯನ್ನು ಸಹ ಜೈಲಾಧಿಕಾರಿಗಳು ಪಾಲಿಸುತ್ತಿಲ್ಲ ಉತ್ತಮ ಆಹಾರ ಹಾಸಿಗೆ ನೀರು ಗಳಿಗೆ ಅವಕಾಶ ಇರಬೇಕು. ತೇಲಿನ ಹೊರ ಜಗತ್ತಿನ ಸಂಪರ್ಕವು ಕೈದಿಗಳಿಗಿರಬೇಕು ಈ ಮಾರ್ಗ ಸೂಚಿಗಳನ್ನು ಅಧಿಕಾರಿಗಳು ಪಾಲಿಸುತ್ತಿಲ್ಲ ಎಂದು ವಾದಿಸಿದರು.ಈ ವೇಳೆ ವಕೀಲ ಸುನೀಲ್ ಕೋರ್ಟ್ ಆದೇಶ ಪಾಲಿಸದಿದ್ದಾಗ ನೋವಾಗುತ್ತದೆ. ಈಗಲೂ ದರ್ಶನ್ ಅವರನ್ನು ಕ್ವಾರಂಟೈನ್ ಸೆಲ್ ನಲ್ಲಿ ಇಟ್ಟಿದ್ದಾರೆ ಅವರಿಗೊಂದು ಇವರಿಗೊಂದು ಸವಲತ್ತು ನೀಡುತ್ತಿದ್ದಾರೆ. ರೇಪಿಸ್ಟ್ ಉಮೇಶ್ ರೆಡ್ಡಿಗೆ ಕಲರ್ ಟಿವಿ ನೀಡಿದ್ದಾರೆ ಆದರೆ ದರ್ಶನಗೆ ಯಾವ ಸವಲತ್ತು ನೀಡಿಲ್ಲ ಎಸ್ ಪಿ ಪಿ ಹೇಗಿರಬೇಕ 'ಂದು ಸುಪ್ರೀಂ ಕೋರ್ಟ್ ಹೇಳಿದೆ ರಿಪಿಟ್ಗೆ ನೀಡುತ್ತಿರುವ ವ್ಯವಸ್ಥೆಯು ಇವರಿಗೆ ಏಕೆ ಇಲ್ಲ? ಇದಕ್ಕೆ ಬೇಕಾದರೆ ದಾಖಲೆ ಒದಗಿಸುತ್ತೇವೆ ಎಂದು ವಾದಿಸಿದರು.ಈ ವೇಳೆ ವಕೀಲ ಸುನೀಲ್ ಕೋರ್ಟ್ ಆದೇಶ ಪಾಲಿಸದಿದ್ದಾಗ ನೋವಾಗುತ್ತದೆ. ಈಗಲೂ ದರ್ಶನ್ ಅವರನ್ನು ಕ್ವಾರಂಟೈನ್ ಸೆಲ್ ನಲ್ಲಿ ಇಟ್ಟಿದ್ದಾರೆ ಅವರಿಗೊಂದು ಇವರಿಗೊಂದು ಸವಲತ್ತು ನೀಡುತ್ತಿದ್ದಾರೆ. ರೇಪಿಸ್ಟ್ ಉಮೇಶ್ ರೆಡ್ಡಿಗೆ ಕಲರ್ ಟಿವಿ ನೀಡಿದ್ದಾರೆ ಆದರೆ ದರ್ಶನಗೆ ಯಾವ ಸವಲತ್ತು ನೀಡಿಲ್ಲ ಎಸ್ ಪಿ ಪಿ ಹೇಗಿರಬೇಕ 'ಂದು ಸುಪ್ರೀಂ ಕೋರ್ಟ್ ಹೇಳಿದೆ ರಿಪಿಟ್ಗೆ ನೀಡುತ್ತಿರುವ ವ್ಯವಸ್ಥೆಯು ಇವರಿಗೆ ಏಕೆ ಇಲ್ಲ? ಇದಕ್ಕೆ ಬೇಕಾದರೆ ದಾಖಲೆ ಒದಗಿಸುತ್ತೇವೆ ಎಂದು ವಾದಿಸಿದರು.

ನಿಯಮದಲ್ಲಿ ಕ್ವಾರಂಟೈನ್ ಪದವಿದ್ದರೆ ಅರ್ಜಿ ವಾಪಸ್ ಪಡೆಯುತ್ತೇನೆ ಎಂದು ಆರೋಪಿ ದರ್ಶನ್ ಪರ ವಕೀಲ ಸುನಿಲ್ ತಿಳಿಸಿದರು.ಆಗ ಕ್ವಾರಂಟೈನ್ ಸೆಲ್ ನಲ್ಲಿ ಇರಲು ಅವಕಾಶವಿದೆ. ನಿಯಮದಲ್ಲಿ ಕ್ವಾರಂಟೈನ್ ಪದ 11 ಕಡೆ ಇದೆ ಎಂದು ನಾನು ತೋರಿಸುತ್ತೇನೆ. ಕ್ವಾರಂಟೈನ್ ಸೆಲ್ ಕೂಡ ಜೇಲಿನ ಒಂದು ಭಾಗವೇ ಜೈಲಿನ ಆಡಳಿತಕ್ಕೆ ಅನುಕೂಲವಾಗುವಂತೆ ಕೈದಿಗೆ ಸೆಲ್ ನಲ್ಲಿ ಇರಿಸಲಾಗುತ್ತದೆ.ಆರೋಪಿ ದರ್ಶನ್ ವಿಚಾರಣಾ ಕೈದಿ. ಜೈಲಿನಲ್ಲಿ ಎಲ್ಲಿ ಬೇಕಾದರೂ ಇಡಬಹುದು. ಜೈಲು ಅಧಿಕ್ಷಕರ ಪರವಾಗಿ ಪ್ರಸನ್ನ ಕುಮಾರ್ ವಾದ ಮಂಡಿಸಿದರು.ಕರ್ನಾಟಕ ಜೈಲು ನಿಯಮದಲ್ಲಿ ಎರಡು ವರ್ಗವಿದೆ ವಿಶೇಷ ಸಾಮಾನ್ಯ ಎಂಬ ಎರಡು ವರ್ಗಗಳಿವೆ. ಆದರೆ ಅಪರಾಧಿಗಳಿಗೆ ಮಾತ್ರ ಎ ಬಿ.ಸಿ ಎಂಬ ವರ್ಗೀಕರಣವಿದೆ. ಕೈದಿಗಳಿರುವ ಭದ್ರತಾ ರಿಸ್ಕ್ ಗಳನ್ನ ಗಮನಿಸಿ ಸೆಲ್ ಗಳನ್ನ ನೀಡಲಾಗುತ್ತದೆ. ಈ ಹಿಂದೆ ಜೈಲಿನಲ್ಲಿದ್ದಾಗ ಸೌಲಭ್ಯ ದುರುಪಯೋಗ ಮಾಡಿದ್ದಾರೆ. ಇತರೆ ಕಾರಣಗಳಿಗೆ ಪ್ರತ್ಯೇಕವಾದ ಸೆಲ್ ನಲ್ಲಿ ಇಡಲು ಅವಕಾಶವಿದೆ ಎಂದು ಸರ್ಕಾರದ ಪರವಾಗಿ ಪ್ರಸನ್ನ ಕುಮಾರ್ ವಾದಿಸಿದರು.ಗ 14 ಜನ ಮಾತ್ರ ಕ್ವಾರಂಟೈನ್ ಸೆಲ್ ನಲ್ಲಿ ಇಡಬಹುದು. ಜರಿನಲ್ಲಿದ್ದಾಗ ಅಪರಾಧ ಎಸಗಿದ್ದರೆ ಮಾತ್ರ ಹೀಗೆ ಮಾಡಬಹುದು.

## ಹೀರಾ ಶ್ರೀಸಿದ್ದರಾಮೇಶ್ವರ ಮಠಕ್ಕೆ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಭೇಟಿ



ಯುವ ಮಾರ್ಗ ಸುದ್ದಿ

**ಸಿರವಾರ, ಸೆ.30–** ಹೀರಾ ಸುಕ್ಷೇತ್ರದ ಶ್ರೀ ಸಿದ್ದರಾಮೇಶ್ವರ ಮಠದಲ್ಲಿ ದಸರಾ ನಿಮಿತ್ಯ ಸೆ.22 ರಿಂದ ಅ.03 ರವರೆಗೆ ನಡೆಯುತ್ತಿರುವ ಪುರಾಣ ಪ್ರವಚನ ಕಾರ್ಯಕ್ರಮದ ಅಂಗವಾಗಿ ಮಾಜಿ ಶಾಸಕರಾದ ರಾಜಾ ವೆಂಕಟಪಗಪ ನಾಯಕ ಅವರು ಭಾನುವಾರ ಸಂಜೆ ಶ್ರೀಮಠಕ್ಕೆ ಭೇಟಿ ನೀಡಿ ಶ್ರೀಮಠದ ಪೂಜ್ಯರಾದ ಶ್ರೀ ಅಯ್ಯಪ್ಪ ತಾತಾನವರ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡರು, ಗ್ರಾಮದ ಮುಖಂಡರು ಹಾಗೂ ಶ್ರೀಮಠದ ಭಕ್ತರು ಇದ್ದರು

## ಯಾರಾದರೂ ಲಿಂಗಾಯತ ಧರ್ಮ ಅಲ್ಲ ಎಂದು ಸಾಬೀತುಪಡಿಸಿದರೆ ಮೂಗು ಕೊಯ್ದುಕೊಳ್ಳುವೆ: ಧನ್ನೂರ್



**ಬೀದರ, ಸೆ.30–**ಲಿಂಗಾಯತ ಧರ್ಮ ಅಲ್ಲ ಎಂದು ಕೆಲವು ರಾಜಕಾರಣಿಗಳು ಹೇಳಿಕೆ ನೀಡುತ್ತಿದ್ದಾರೆ. ಅವರ ಹೇಳಿಕೆಯೇ ಒಂದು ಧರ್ಮದ್ರೋಹವಾಗಿದೆ. "ಎಮಗೂ ನಿಮಗೂ ಬಸವಣ್ಣನವ ಧರ್ಮವಯ್ಯಾ' ಎಂದು ಕಾಯಕಯೋಗಿ ಸಿದ್ಧರಾಮೇಶ್ವರರು ಹೇಳಿರುವಾಗ ಇವರೆಲ್ಲರೂ ಬಸವಾದಿ ಶರಣರಿಗಿಂತ ದೊಡ್ಡವರೇ ? ಎಂದು ಬಸವರಾಜ ಧನ್ನೂರ ಪ್ರಶ್ನೆ ಮಾಡಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕೆಲವರು ಲಿಂಗಾಯತ ಧರ್ಮಕ್ಕೆ ಮಾನ್ಯತೆ ಸಿಕ್ಕಿಲ್ಲ. ಹಾಗಾಗಿ ಹಿಂದೂ ಎಂದು ಬರೆಸಿ ಎನ್ನುತ್ತಿದ್ದಾರೆ. ಚಿನ್ನಕ್ಕೆ ಸರ್ಕಾರಿ ಮೊಹರು ಇಲ್ಲದಿದ್ದರೆ ಅದು ತನ್ನ ಬೆಲೆ ಕಳೆದುಕೊಳ್ಳುವುದೇ? ಹಾಗೆಯೇ ಮಾನ್ಯತೆ ಸದ್ಯ ಸಿಗದಿದ್ದರೂ ಬಸವಣ್ಣನವರು ಕೊಟ್ಟ ಪರಿಪೂರ್ಣ, ಸಾಂವಿಧಾನಿಕ ಧರ್ಮ 'ಲಿಂಗಾಯತ ಧರ್ಮ'ವೇ ಆಗಿದೆ. ಯಾರಾದರೂ ಲಿಂಗಾಯತ ಧರ್ಮ ಅಲ್ಲ ಎಂದು ಸಾಬೀತುಪಡಿಸಿದರೆ ನಾನು 'ಮೂಗ ಕೊಯ್ದುಕೊಳ್ಳುವೆ' ಎಂದರು.

ಲಿಂಗಾಯತರು ಈಗ ಜಾಗೃತರಾಗಿದ್ದಾರೆ. ಇಂತಹ ದಾರಿ ತಪ್ಪಿಸುವ ಹೇಳಿಕೆ ಯಾರೂ ನೀಡಬಾರದು. ವೀರಶೈವ ಕೂಡಾ ಲಿಂಗಾಯತ ಧರ್ಮದ ಒಂದು ಒಳಪಂಗಡ. ಮಾನ್ಯತೆ ಸಿಗುವುದರಿಂದ ಆ ಪಂಗಡದವರಿಗೂ ಅನುಕೂಲವಿದೆ ಎಂದರು.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಬಸವ ಸಂಸ್ಕೃತಿ ಅಭಿಯಾನ ಯಶಸ್ವಿಯಾಗಿ ಜರುಗಿದ್ದು, ಅ. 5ರಂದು ಬೆಂಗಳೂರಿನ ಅರಮನೆ ಮೈದಾನದ ಗೇಟ್ ಸಂ. 4ರ ಗಾಯತ್ರಿ ವಿಹಾರದಲ್ಲಿ ಸಮಾರೋಪ ಸಮಾರಂಭ ಜರುಗಲಿದೆ. ಸುಮಾರು 500ಕ್ಕೂ ಅಧಿಕ ಬಸವಪರ ಮಠಾಧೀಶರು, ಲಕ್ಷದ ತೊಂಭತ್ತಾರು ಸಾವಿರ ಬಸವ ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ಜಾಗತಿಕ ಲಿಂಗಾಯತ ಮಹಾಸಭೆಯ ರಾಜ್ಯ ಉಪಾಧ್ಯಕ್ಷ ಬಸವರಾಜ ಧನ್ನೂರ ತಿಳಿಸಿದರು.

ವಿಶ್ವಗುರು ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿ, ಎಲ್ಲಾ ಶಾಲಾ ಕಾಲೇಜುಗಳಲ್ಲಿ, ಸರ್ಕಾರಿ ಕಚೇರಿಗಳಲ್ಲಿ ಬಸವೇಶ್ವರರ ಭಾವಚಿತ್ರ ಅಳವಡಿಸಬೇಕೆಂದು ಆದೇಶಿಸಿ ಒಂದು ವರ್ಷ ಪೂರೈಸಿದೆ. ಮುಂದಿನ ಪೀಳಿಗೆಗೆ ಬಸವಣ್ಣನವರ ಜೀವನ ಸಾಧನೆ ಪರಿಚಯಿಸುವುದು ನಮ್ಮ ಆದ್ಯ ಕರ್ತವ್ಯ. ಈ ಪ್ರಯುಕ್ತ ಈ ಅಭಿಯಾನ ಜರುಗಿದ್ದು, ಲಿಂಗಾಯತ ಮಠಾಧಿಪತಿಗಳ ಒಕ್ಕೂಟ, ಜಾಗತಿಕ ಲಿಂಗಾಯತ ಮಹಾಸಭೆ ಸೇರಿದಂತೆ ಹತ್ತಾರು ಬಸವಪರ ಸಂಘಟನೆಗಳ ವತಿಯಿಂದ ಅ. 5ರಂದು ಬೆಂಗಳೂರಿನಲ್ಲಿ ಸಿಎಂ ಸಿದ್ಧರಾಮಯ್ಯನವರಿಗೆ ಅಭಿನಂದನೆ ಸಲ್ಲಿಸಲಾಗುತ್ತಿದೆ ಎಂದರು.ಬೀದರನಿಂದ ಸುಮಾರು 10 ಸಾವಿರಕ್ಕೂ ಹೆಚ್ಚು ಬಸವ ಭಕ್ತರು ಅಭಿಯಾನದಲ್ಲಿ ಪಾಲ್ಗೊಳ್ಳಲಿದ್ದು, ಪ್ರತಿಯೊಬ್ಬರೂ ಬಿಳಿ ಧೋತಿ ಮತ್ತು ಇಳಕಲ್ ಸೀರೆ ಧರಿಸತಕ್ಕದ್ದು. ಬೆಂಗಳೂರಿಗೆ ಹೋಗಲು ವಿಶೇಷ ರೈಲಿನ ವ್ಯವಸ್ಥೆಗಾಗಿ ಈಗಾಗಲೇ ಸಂಸದ ಸಾಗರ ಖಂಡ್ರೆ ಹಾಗೂ ಕೇಂದ್ರದ ರಾಜ್ಯ ರೈಲ್ವೆ ಖಾತೆಯ ಸಚಿವ ವಿ.ಸೋಮಣ್ಣ ಅವರಿಗೆ ಮನವಿ ಸಲ್ಲಿಸಲಾಗಿದೆ. ಸಕಾರಾತ್ಮಕವಾಗಿ ಸ್ಪಂದನೆ ಮಾಡಿದ್ದಾರೆ ಎಂದು ಧನ್ನೂರ ತಿಳಿಸಿದರು.

ಸರ್ಕಾರಿ ಬಸ್ ವ್ಯವಸ್ಥೆ ಕೂಡಾ ಮಾಡಲಾಗಿದೆ. ಒಬ್ಬರಿಗೆ ಹೋಗಿ ಬರಲು 2 ಸಾವಿರ ಮತ್ತು ಸ್ಲೀಪರ್ ಕೋಚ್ ಬಸ್ಸಿಗೆ ಹೋಗಿ ಬರಲು ಒಬ್ಬರಿಗೆ 3 ಸಾವಿರ ಹಣ ನಿಗದಿಪಡಿಸಲಾಗಿದೆ. ನಾಲ್ಕು ಚಕ್ರದ ವಾಹನದಲ್ಲಿ ಹೋಗುವವರು ಅ. 4ರಂದು ಸಾ. 6 ಗಂಟೆಗೆ ನೌಬಾದ ಬಸವೇಶ್ವರ ವೃತ್ತದ ಹತ್ತಿರ ಸೇರಬೇಕೆಂದು ತಿಳಿಸಿದರು. ಹೆಚ್ಚಿನ ಮಾಹಿತಿಗಾಗಿ ಸುರೇಶ ಸ್ವಾಮಿ (9448262614), ಯೋಗೇಶ ಶ್ರೀಗಿರಿ (9449821117), ವಿಲಾಸ ಪಾಟೀಲ (9535076555), ವೀರಶೆಟ್ಟಿ ಪಾಟೀಲ (9845455630), ಯೋಗೇಂದ್ರ ಯದಲಾಪುರೆ (7019071385) ಗೆ ಸಂಪರ್ಕಿಸಬಹುದು.

## ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಹ ಪ್ರಾಧ್ಯಾಪಕರಾದ ಸುಭಾಶ್ಚಂದ್ರ ರವರಿಗೆ ಡಾಕ್ಟರೇಟ್ ಪದವಿ

ಯುವ ಮಾರ್ಗ ಸುದ್ದಿ



**ದೇವದುರ್ಗ,ಸೆ.30–** ಸರ್ಕಾರಿ ಪ್ರಥಮ ದರ್ಜೆ ಕಾಲೇಜು ರಾಯಚೂರಿನ ಸಮಾಜಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಸುಭಾಶ್ಚಂದ್ರ ಲಿಂಗನಗೌಡ ರವರಿಗೆ ಡಾಕ್ಟರೇಟ್ ಪದವಿ ಲಭಿಸಿದೆ.

ಡಾಕ್ಟರೇಟ್ ಪದವಿ ಪಡೆದ ಸುಭಾಶ್ಚಂದ್ರ ಲಿಂಗನಗೌಡ, ಚಿತ್ತಾಪುರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಿವೃತ್ತ ಸಮಾಜಶಾಸ್ತ್ರದ ಸಹಪ್ರಾಧ್ಯಾಪಕರಾದ ಡಾ.ಎ.ಜಿ.ಖಾನ್ ರವರ ಮಾರ್ಗದರ್ಶನದಲ್ಲಿ "Challenges of house hold women a sociological study of kalburgi" ಕುರಿತು ಮಂಡಿಸಿದ ಸಂಶೋಧನೆಯ ಮಹಾ ಪ್ರಬಂಧಕ್ಕೆ ಗುಲ್ಬರ್ಗ ವಿಶ್ವವಿದ್ಯಾಲಯ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ. ಡಾ. ಸುಭಾಷ್ ಚಂದ್ರ ಲಿಂಗನಗೌಡ ಇವರು ದೇವದುರ್ಗ ತಾಲೂಕಿನಲ್ಲಿ ಸಾಹಿತ್ಯಕವಾಗಿ, ಸಾಮಾಜಿಕವಾಗಿ ಮತ್ತು ಸಂಸ್ಕೃತಿಕವಾಗಿ ಇನ್ನಿತರ ಹಲವು ಕ್ಷೇತ್ರಗಳಲ್ಲಿ ಸಮಾಜಮುಖಿ ಕಾರ್ಯವನ್ನು ಮಾಡಿರುವ ಇವರು ದಿನಾಂಕ 06-09-2025 ರಂದು ಕಲ್ಬುರ್ಗಿ ವಿಶ್ವವಿದ್ಯಾಲಯದ ಸಮಾಜ ಶಾಸ್ತ್ರ ಅಧ್ಯಯನ ವಿಭಾಗದಲ್ಲಿ ನಡೆದ ಸಂದರ್ಶನದಲ್ಲಿ ಡಾಕ್ಟರೇಟ್ ಪದವಿಯನ್ನು ಪಡೆದುಕೊಂಡಿದ್ದಾರೆ.

ಡಾ.ಸುಭಾಶ್ಚಂದ್ರ ಇವರ ಈ ಸಾಧನೆಗೆ ಕುಟುಂಬದವರು ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರು ಮತ್ತು ಸಹೋದ್ಯೋಗಿಗಳು ಹಾಗೂ ಆತ್ಮೀಯ ಸ್ನೇಹಿತರು ಸಮಾಜಮುಖಿ ಬಳಗದವರೆಲ್ಲರೂ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಬೆಳೆ ಹಾನಿಗೆ ತಕ್ಷಣ ಪರಿಹಾರ ಒದಗಿಸಿ : ಲಕ್ಷ್ಮಣ ರಾಠೋಡ್



ಯುವ ಮಾರ್ಗ ಸುದ್ದಿ

**ಅರಕೇರಾ,ಸೆ.30–** ತಾಲ್ಲೂಕಿನಲ್ಲಿ ಹೆಚ್ಚಿನ ಪ್ರಮಾಣದ ಮಳೆ ಆಗಿದ್ದರಿಂದ ಬೆಳೆಹಾನಿಯಾಗಿದೆ. ಮುಂಗಾರಿನಲ್ಲಿ ಬಿತ್ತನೆ ಮಾಡಿದ ಹತ್ತಿ, ತೊಗರಿ, ಸೂರ್ಯಕಾಂತಿ, ಶೇಂಗಾ, ತೋಟಗಾರಿಕೆ ಬೆಳೆ ಸೇರಿದಂತೆ ಇತ್ಯಾದಿ ಬೆಳೆಗಳು ಅಪಾರ ಪ್ರಮಾಣದಲ್ಲಿ ಹಾನಿಯಾಗಿವೆ. ಸರ್ಕಾರ ತಕ್ಷಣ ಪರಿಹಾರ ಬಿಡುಗಡೆ ಮಾಡಬೇಕು ಎಂದು ಅರಕೇರಾ ಬಿಜೆಪಿ ಮಂಡಲ ಅಧ್ಯಕ್ಷ ಲಕ್ಷ್ಣ ರಾಠೋಡ್ ಒತ್ತಾಯಿಸಿದರು.

ಪಟ್ಟಣದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸತತ ಮಳೆಯಿಂದ ಜಮೀನುಗಳಲ್ಲಿ ನೀರು ಸಂಗ್ರಹಗೊಂಡು ರೈತರು ಬೆಳೆದ ಬೆಳೆ ಕೊಳೆತು ಹೋಗಿವೆ. ಹಿಂದಿನ ಬರ ಪರಿಹಾರವು ಸರಿಯಾಗಿ ರೈತರಿಗೆ ತಲುಪಿಲ್ಲ. ರೈತರು ಶೋಚನಿಯ ಸ್ಥಿತಿಯಲ್ಲಿ ಇದ್ದಾರೆ. ಈಗಲಾದರೂ ಸಮರ್ಪಕ ಸಮೀಕ್ಷೆ ನಡೆಸಿ ತಿಂಗಳೊಳಗೆ ಪರಿಹಾರ ಕಲ್ಪಿಸಬೇಕು. ಇಲ್ಲದಿದ್ದರೆ ಹೋರಾಟ ಮಾಡಲಾಗುವುದು ಎಂದು ಸರ್ಕಾರಕ್ಕೆ ಆಗ್ರಹಿಸಿದರು.

**ರಸ್ತೆ ದುರಸ್ತಿಗೊಳಿಸಿ:** ದೇವದುರ್ಗ – ಅರಕೇರಾ – ಸಿರವಾರ ಮಾರ್ಗದ ರಾಜ್ಯ ಹೆದ್ದಾರಿ ರಸ್ತೆಯು ಅರೆ ಬರೆಯಾಗಿದೆ. ಪೂರ್ಣ ಪ್ರಮಾಣದಲ್ಲಿ ಕಾಮಗಾರಿ ಮುಗಿಯದ ಕಾರಣ ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗಿದೆ. ಅಲ್ಲದೆ ಅಪಘಾತಗಳ ಸಂಖ್ಯೆ ಹೆಚ್ಚತೊಡಗಿವೆ. ಅರಕೇರಾದಲ್ಲಿ 3 ಕಿಮಿ ರಸ್ತೆ ಹಾಗೂ ಮಾನಸಗಲ್ ಕ್ರಾಸ್ ಬಳಿ 500 ಮೀಟರ್ ಚಿಕ್ಕ ಹೊನ್ನಕುಣಿ ಕ್ರಾಸ್ ಬಳಿ 500 ಮೀಟರ್ ಸೇರಿ ಒಟ್ಟು 4 ಕಿಮಿ ಚತುಷ್ಪಥ ರಸ್ತೆ ನಿರ್ಮಾಣ ಯೋಜನೆ ನೆನೆಗುದಿಗೆ ಬಿದ್ದಿದೆ. ಹೀಗಾಗಿ ಅಲ್ಲಿ ಬೃಹತ್ ಪ್ರಮಾಣದ ತಗ್ಗು ಗುಂಡಿಗಳು ನಿರ್ಮಾಣವಾಗಿವೆ. ವಾಹನ ಸಂಚಾರ ದುಸ್ತರವಾಗಿದ್ದು, ಬೈಕ್ ಸವಾರರು ಜೀವ ಭಯದಲ್ಲಿ ಸಂಚಾರ ಮಾಡುವಂತಾಗಿದೆ. ಟೆಂಡರ್ ಆದರೂ ಸಹ ಈ ಮಾರ್ಗದ ಹಳ್ಳದ ಸೇತುವೆಗಳ ನಿರ್ಮಾಣ ಕಾಮಗಾರಿ ಪ್ರಾರಂಭಿಸಿಲ್ಲ. ಕಾಮಗಾರಿ ಪ್ರಗತಿ, ಕಾಮಗಾರಿ ಅಪೂರ್ಣ ಬಗ್ಗೆ ಸೂಚನಾ ಫಲಕಗಳು ಅಳವಡಿಸಿಲ್ಲ. ಇದರಿಂದಾಗಿ ಸುಗಮ ಸಂಚಾರಕ್ಕೆ ಅಡಚಣೆ ಉಂಟಾಗಿದೆ. ಶೀಘ್ರದಲ್ಲೇ ಹದಗೆಟ್ಟ ರಸ್ತೆಯನ್ನು ದುರಸ್ತಿ ಮಾಡಿ ಬಾಕಿ ಇರುವ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ನಿರ್ಲಕ್ಷ್ಯ ವಹಿಸಿದರೆ ರಸ್ತೆ ಸಂಚಾರ ತಡೆದು ಪ್ರತಿಭಟಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಯುವ ಮೋರ್ಚಾ ಅಧ್ಯಕ್ಷ ಕೆ.ಭಗವಂತ್ರಾಯ ನಾಯಕ, ಪ್ರಧಾನ ಕಾರ್ಯದರ್ಶಿ ನಾಗರಾಜ ಅಬಕಾರಿ, ತಾಲ್ಲೂಕು ವಕ್ತಾರ ಜಿ.ಹನ್ಮಂತ್ರಾಯ ನಾಯಕ ಕೊತ್ತದೊಡ್ಡಿ, ಕಾರ್ಯದರ್ಶಿ ಮಲ್ಲಯ್ಯ ಪೂಜಾರಿ, ನಗರ ಘಟಕ ಅಧ್ಯಕ್ಷ ತನೋಜ ಕುರುಕುಂದಿ, ಶ್ರೀಮಂತ ನಾಯಕ ಬಿ.ಆರ್.ಗುಂಡ, ದೇವೇಂದ್ರ ಗಾಲಿ ಕೊತ್ತದೊಡ್ಡಿ ಇದ್ದರು.

## ಔಷಧಿ ಸೇವನೆಯಷ್ಟೇ ಫಾರ್ಮಸಿಸ್ಟ ಕರ್ತವ್ಯ ಅವಶ್ಯ: ಡಿಎಚ್ಓ ಡಾ ಸುರೇಂದ್ರ ಬಾಬು

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.30–**ಆರೋಗ್ಯವನ್ನು ಯೋಚಿಸಿದಷ್ಟೆ, ಫಾರ್ಮಸಿಸ್ಟರ ಬಗ್ಗೆಯು ಯೋಚಿಸಿ ಎಂಬ ಧ್ಯೆಯ ವಾಕ್ಯದೊ ಂದಿಗೆ ಜಾಗತಿಕವಾಗಿ ಔಷಧಿಯ ಮಾಹಿತಿ, ಸರಿಯಾದ ಸೇವನೆ, ಬಳಕೆಯ ಅವಶ್ಯಕತೆ ಕುರಿತು ಸಾರ್ವಜನಿಕರಿಗೆ ಸೂಕ್ತ ಮಾಹಿತಿ ನೀಡುವ ಬಗ್ಗೆ ನಾವೆಲ್ಲರೂ ಜಾಗೃತಿ ನೀಡಬೇಕಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರ ಬಾಬು ತಿಳಿಸಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಆಹಾರ ಸುರಕ್ಷತೆ ಮತ್ತು ಔಷಧಿ ಆಡಳಿತ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಸಹಾಯಕ ಔಷದಿ ನಿಯಂತ್ರಕರ ಕಚೇರಿ ಸಹಯೋಗದಲ್ಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಲ್ಲಿ ಸೆ.30ರಂದು ನಡೆದ ವಿಶ್ವ ಫಾರ್ಮಸಿಸ್ಟ್ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

## ಮದರಸಾಗಳಲ್ಲಿ ಅತಿಥಿ ಶಿಕ್ಷಕರ ನೇಮಕಾತಿಗೆ ಅರ್ಜಿ ಆಹ್ವಾನ

**ರಾಯಚೂರು,ಸೆ.30–**ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025-26ನೇ ಶೈಕ್ಷಣಿಕ ಸಾಲಿನಲ್ಲಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಜೀಂ ಪ್ರೇಮ್ ಜೀ ಫೌಂಡೇಶನ್ ಆಯ್ಕೆ ಮಾಡಿರುವ ಮದರಸಾಗಳಲ್ಲಿ ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಬಾಗಲಕೋಟೆ, ವಿಜಯಪುರ, ಕಲಬುರ್ಗಿ, ಬೆಂಗಳೂರು ನಗರ, ರಾಯಚೂರು ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಯ್ದ ಮದರಸಾಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಧಾರ್ಮಿಕ ಶಿಕ್ಷಣದೊಂದಿಗೆ ಎನ್ಐಒಎಸ್ ಮುಖಾಂತರ ಔಪಚಾರಿಕ ಶಿಕ್ಷಣವನ್ನು ನೀಡುವುದರ ಮೂಲಕ ಅವರ ಭವಿಷ್ಯವನ್ನು ರೂಪಿಸುವ ನಿಟ್ಟಿನಲ್ಲಿ ಅಜೀಂ ಪ್ರೇಮ್ ಜೀ ಫೌಂಡೇಶನ್ ಅವರ ಸಹಯೋಗದೊಂದಿಗೆ ಔಪಚಾರಿಕ ಶಿಕ್ಷಣ ವಿಷಯಗಳಾದ ಕನ್ನಡ, ಇಂಗ್ಲೀಷ್, ವಿಜ್ಞಾನ ಮತ್ತು ಗಣಿತ ವಿಷಯಗಳನ್ನು ಬೋಧಿಸಲು ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ಜಿಲ್ಲಾ ಹಂತದಲ್ಲಿ ಆಯ್ಕೆ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ.

**ಅರ್ಹತೆ:** ಅಭ್ಯರ್ಥಿಗಳು, ಡಿಇಡಿ ಅಥವಾ ಬಿಇಡಿ ವಿದ್ಯಾರ್ಹತೆಯನ್ನು ಹೊಂದಿರಬೇಕು. ಉರ್ದು ಭಾಷೆಯಲ್ಲಿ ಕುಶಲತೆಯನ್ನು ಹೊಂದಿರಬೇಕು. ಟಿಇಟಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಅರ್ಜಿಯನ್ನು ಅಕ್ಟೋಬರ್ 04ರೊಳಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಚೇರಿ ಅಥವಾ ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧಿಕೃತ ಜಾಲತಾಣದಲ್ಲಿ ಸಲ್ಲಿಸಬಹುದಾಗಿದೆ.

ಸಾಮಾನ್ಯ ಪ್ರವೇಶ ಪರೀಕ್ಷೆಯು ಅಕ್ಟೋಬರ್ 10 ಹಾಗೂ ಫಲಿತಾಂಶವನ್ನು ಅಕ್ಟೋಬರ್ 13ರಂದು ಪ್ರಕಟಿಸಲಾಗುವುದು. ಅಲ್ಲದೆ ಅಕ್ಟೋಬರ್ 15ರಂದು ಬೋಧನಾ ಪ್ರಾತ್ಯಕ್ಷಿಕೆಯನ್ನು ಹಮ್ಮಿಕೊಳ್ಳಲಾಗಿದೆ. ಒಂದು ಮದರಸಾಗೆ ತಲಾ ಎರಡು ಶಿಕ್ಷಕರನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಈ ಶಿಕ್ಷಕರು ಕನ್ನಡ, ಇಂಗ್ಲೀಷ್, ವಿಜ್ಞಾನ ಮತ್ತು ಗಣಿತ ವಿಷಯಗಳನ್ನು ಬೋಧಿಸಲು ಸಕ್ಷಮರಾಗಿರಬೇಕು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಕೆಡಿಪಿ ಸಭೆಗೆ ಬಾರದ ಸಾರಿಗೆ ಸಂಸ್ಥೆ ಡಿಸಿ ಅಮಾನತಿಗೆ ಸಚಿವರ ಸೂಚನೆ



**ಬಳ್ಳಾರಿ,ಸೆ.30–** ಕೆಡಿಪಿ ಸಭೆಗೆ ಯಾವುದೇ ಕಾರಣ ನೀಡದೆ ಬಾರದ ಮತ್ತು ಜನರೊಡನೆ ಕೆಟ್ಟದಾಗಿ ನಡವಳಿಕೆ ಮಾಡುತ್ತಿದ್ದಾರೆಂದು ಕೆಕೆಆರ್ ಟಿಸಿಯ ಬಳ್ಳಾರಿ ವಿಭಾಗದ ನಿಯಂತ್ರಣಾಧಿಕಾರಿಯನ್ನು ಸಸ್ಪೆಂಡ್ ಮಾಡಬೇಕು. ನಾನು ಹೇಳುವವರೆಗೆ ಅಮಾನತ್ತು ಹಿಂಪಡೆಯಬಾರದು ಎಂದು ವಸತಿ, ವಕ್ಫ್ ಮತ್ತು ಜಿಲ್ಲಾ ಉಸ್ತುವಾರಿ ಸಚಿವರು ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಹೇಳಿದ್ದಾರೆ.

ಅವರು ಇಲ್ಲಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪ್ರಸಕ್ತ ಸಾಲಿನ ಜಿಲ್ಲಾ ಮಟ್ಟದ ಮೊದಲ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಪಂಚ ಗ್ಯಾರಂಟಿ ಯೋಜನೆಗಳು ಜಿಲ್ಲೆಯಲ್ಲಿ ಶೇ.96.95 ರಷ್ಟು ಅನುಷ್ಠಾನವಾಗಿದ್ದು, ನೂರಕ್ಕೆ ನೂರರಷ್ಟು ಅನುಷ್ಠಾನವಾಗಬೇಕು ಎಂದರು.

ಅಕ್ರಮ ಅಕ್ಕಿ ಸಾಗಾಣಿಕೆಗೆ ಕಡಿವಾಣ ಹಾಕಿ:

ಪಡಿತರ ಅಕ್ಕಿಯನ್ನು ಜನತೆ ತೆಗೆದುಕೊಳ್ಳದೆ ಅವರು ಪಡಿತರ ಅಂಗಡಿಯವರಿಂದಲೇ ಹಣ ಪಡೆದುಕೊಳ್ಳುತ್ತಿದ್ದಾರಂತೆ. ಪಡಿತರ ಡಿಪೋದಲ್ಲಿ ಅಕ್ರಮ ಮಾರಾಟ ನಡೆಯುತ್ತೆ ಇದಕ್ಕರ ಕ್ರಮ ತೆಗೆದುಕೊಳ್ಳಬೇಕೆಂದು ಸೂಚಿಸಿದರು.ನಕಲಿ ರೇಷನ್ ಕಾರ್ಡ್ ರದ್ದತಿ ಬಗ್ಗೆ ಪ್ರಶ್ನಿಸಿದಾಗ ಆಹಾರ ಇಲಾಖೆಯ ಜೆಡಿ ಅವರು ಉತ್ತರ ನೀಡಿ. 25 ಲಕ್ಷ ರೂ ಮೇಲ್ಪಟ್ಟು ವ್ಯವಹಾರ ಮಾಡುವ, 7.5 ಎಕರೆ ಜಮೀನು ಇರುವ, ನೆರೆಯ ಆಂದ್ರದಲ್ಲಿಯೂ ಕಾರ್ಡು ಇರುವವರನ್ನು ಗುರುತಿಸಿ 6238 ಬಿಪಿಎಲ್ ನಿಂದ ಎಪಿಎಲ್ ಮಾಡಿದೆ. ಕಳೆದ ಮೂರು ವರ್ಷದಲ್ಲಿ 29 ಸಾವಿರ ಜನರು ಬಿಪಿಎಲ್ ಕಾರ್ಡಿಗೆ ಅರ್ಜಿ ಸಲ್ಲಿಸಿದ್ದರು. ಅದರಲ್ಲಿ 13 ಸಾವಿರ ಜಬರಿಗೆ ಕೊಟ್ಟಿದೆ. ಈಗ 10410 ಬಿಪಿಎಲ್ ಕಾರ್ಡು ಡಿಮ್ಯಾಂಡ್ ಇದೆ. ಅ.1 ರಿಂದ ಮತ್ತೆ ಬಿಪಿಎಲ್ ಕಾರ್ಡು ನೀಡಲು ಅನುಮತಿ ದೊರೆಯಲಿದೆಂದರು. ಬಳ್ಳಾರಿಯಲ್ಲಿ ಅಕ್ಕಿ ಬದಲು ಜನ ಹಣ ಕೇಳುತ್ತಾರೆ. ಕಾರಣ ಇಲ್ಲಿ ಭತ್ತ ಬೆಳೆಯುವುದರಿಂದ ಎಂದೇಳಿದರು.ಗೃಹ ಜ್ಯೋತಿಯಲ್ಲಿ ಮೀಟರ್ ಇಲ್ಲದೆ ಮನೆ ಇವೆ. ಅಂತಹವರು ಮೀಟರ್ ಪಡೆಯಲು ಜನ ರೆಡಿ ಇದ್ದಾರೆ. ಆದರೆ ನೀವು ಹೆಚ್ಚಿನ ಹಣ ಕೇಳುತ್ತಿದ್ದೀರಿ ಎಂದು ದೂರು ಬಂದಿದೆ ಎಂದು ಜೆಸ್ಕಾಂ ಅಧಿಕಾರಿಗಳಿಗೆ ತರಾಟೆ ತೆಗೆದುಕೊಂಡರು ಸಚಿವರು. ಬಾಕಿ ಬಿಲ್ ಗೆ ಬಡ್ಡಿ ಕೇಳಬೇಡಿ. ಬಡ್ಡಿ ಮನ್ನಾಗೆ ಸಿಎಂ ಬಳಿ ಮಾತನಾಡುವೆ. ಅಲ್ಲಿವರೆಗೆ ಸಂಪರ್ಕ ಕಟ್ ಮಾಡಬೇಡಿ ಎಂದು ಸೂಚಿಸಿದರು.ಉದ್ಯೋಗ ವಿನಮಯ ಕಚೇರಿಯಿಂದ ಉದ್ಯೋಗ ಮೇಳದ ಮೂಲಕ ಈ ವರ್ಷ ಎರೆಡು ನೂರು ಜನರಿಗೆ ಉದ್ಯೋಗ ನೀಡಿದೆ ಎಂದಿದ್ದಕ್ಕೆ ಇದು ಸರಿಯಿದ್ದರೆ ನಿಮ್ಮನ್ನು ಸನ್ಮಾನಮಾಡುವೆ ಎಂದರು ಅಧಿಕಾರಿ ಹಟ್ಟಪ್ಪ ಅವರಿಗೆ.

ಕಂಪ್ಲಿಯಲ್ಲಿ 130 ಎಕರೆ ಸ್ಥಳ ಇದೆ. ಹತ್ತುಕೋಟಿ ರೂ ವೆಚ್ಚದ ಕೃಷಿ ಸಂಶೋಧನೆ ಕೇಂದ್ರ ಮಾಡಿ ಎಂದು ಶಾಸಕ ಗಣೇಶ್ ಹೇಳಿದರು.ಯೂರಿಯಾ ಗೊಬ್ಬರ ಕೊರತೆ ಆಗದಂತೆ ನೋಡಿಕೊಳ್ಳಿ. ಅಗತ್ಯ ವಿರುವಷ್ಟು ಗೊಬ್ಬರ ತರಿಸಿ ಎಂದು ಶಾಸಕ ನಾಗೇಂದ್ರ ಹೇಳಿದರು.ಡಿಸಿ.ಕೆ.ನಾಗೇಂದ್ರ ಪ್ರಸಾದ್ ಅವರು ಬರುವಡಿಸೆಂಬರ್ ಒಳಗೆ ಜೋಳಖರೀದಿ ಕೇಂದ್ರತೆರೆಯಿರಿ.ಮಾರುಕಟ್ಟೆಗೆ ರೆಡಿಯಾಗಿ ಎಂದು ಹೇಳಿದರು.ಸಿರುಗುಪ್ಪ ತಾಲೂಕಿನಲ್ಲಿ ಬೆಳೆ ನಷ್ಟ ಪರಿಹಾರಕ್ಕೆ ಸರ್ವೆ ಮಾಡಲು ಕಳಿಸಿ ಎಂದು ಶಾಸಕ ನಾಗರಾಜ್ ಕೇಳಿದರು.ಬಳ್ಳಾರಿ ಜಿಲ್ಲೆಯಲ್ಲಿ ಹಾಲು ಉತ್ಪಾದನೆ ಕುಸಿದಿದೆ. ಹೆಚ್ಚು ಮಾಡಲು ಕ್ರಮ ತೆಗೆದುಕೊಳ್ಳಿ ಎಂದುಪ್ರಭುಶಂಕರ್ ಕೆಎಂಎಫ್ ಎಂಡಿ ಪ್ರಭು ಶಂಕರ್ ಅವರಿಗೆ ಸೂಚಿಸಿದರು. ಅವರು 11 ಸಾವಿರ ಲೀಟರ್ ಮಾತ್ರ ಬರುತ್ತಿದೆ. ಕೇವಲ60 ಹಾಲು ಉತ್ಪಾದಕ ಸಂಘಗಳು ಇದ್ದವು ಅವನ್ನು 96 ಮಾಡಿದೆ 130 ಮಾಡಲಿದೆ ಎಂದು ಹೇಳಿದರು.

ಸಂಡೂರು ತಾಲೂಕಿಗೆ 2500. ಬಳ್ಳಾರಿ ತಾಲೂಕಿಗೆ 2000 ಸಾವಿರ ರಾಸುಗಳನ್ನು ಬರುವ ಆರು ತಿಂಗಳಲ್ಲಿ ವಿತರಿಸಲಿದೆ ಎಂದು ಪಶು ಸಂಗೋಪನಾಧಿಕಾರಿ ಹೇಳಿದರು. ಶಾಸಕ ನಾಗೇಂದ್ರ ಅವರು ಜಿಲ್ಲೆಯಲ್ಲಿ ಒಂದು ಲಕ್ಷ ಲೀಟರ್ ಹಾಲು ಉತ್ಪಾದನೆ ಆಗಬೇಕು ಆ ನಿಟ್ಟಿನಲ್ಲಿ ಕೆಲಸ ಮಾಡಿ ಎಂದರು. ಶಾಸಕ ಗಣೇಶ್‌ಬೈಲೂರಲ್ಲಿ ಹತ್ತು ಎಕರೆ ಜಮೀನು ಇದೆ ಅದನ್ನು ಕಂದಾಯ ಇಲಾಖೆಯಿಂದ ಕೆಎಂಎಫ್ ಗೆ ಖರೀದಿಸಲು ಸೂಚಿಸಿದರು.ಕೊಳಗಲ್ಲು ಬಳಿ ಮೆಗಾ ಡೈರಿ ಮುಖ್ಯ ರಸ್ತೆಗೆ ಸಂಪರ್ಕ ಪಡೆಯಲು ಅನುವಾಗುವಂತೆ ಮತ್ತಷ್ಟು ಅರ್ಧ ಎಕರೆ ಖರೀದಿ ಮಾಡಲು ಪ್ರಸ್ತಾವನೆ ಕಳಿಸಿ ಎಂದು ಸೂಚಿಸಲಾಯ್ತು.

ಮಹಾನಗರ ಪಾಲಿಕೆ ಹಳೆಯ ತಾಲ್ಲೂಕು ಕಚೇರಿ ಆವರಣಕ್ಕೆ:30 ವರ್ಷಗಳ ಹಳೆಯ ಕಟ್ಟಡವಾದ ಬಳ್ಳಾರಿ ಮಹಾನಗರ ಪಾಲಿಕೆ ಕಚೇರಿಯನ್ನು 2.50 ಎಕರೆ ಪ್ರದೇಶವಿರುವ ನಗರದ ಹಳೆಯ ತಾಲ್ಲೂಕು ಕಚೇರಿ ಆವರಣದಲ್ಲಿ ಸುಮಾರು 30 ಕೋಟಿ ರೂ. ವೆಚ್ಚದಲ್ಲಿ ಆಧುನಿಕ ಮಾದರಿಯ ಸುಸಜ್ಜಿತ ಪಾಲಿಕೆ ಕಚೇರಿ ನಿರ್ಮಾಣ ಮಾಡಲಾಗುವುದು ಎಂದು ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಹೇಳಿದರು.ಇದಕ್ಕೆ ಜಾಗ ಒದಗಿಸಿಕೊಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಪ್ರಸ್ತಾಪಿದರು. ಹಳೆಯ ಪಾಲಿಕೆ ಕಚೇರಿ ಜಾಗದಲ್ಲಿ ವಾಣಿಜ್ಯ-ವ್ಯಾಪಾರ ಮಳಿಗೆಗಳನ್ನು ನಿರ್ಮಿಸಲಾಗುವುದು. ಹಳೆಯ ಕಚೇರಿ ಆವರಣದಲ್ಲಿರುವ ಪೊಲೀಸ್ ಠಾಣೆ, ಕೃಷಿ ಮತ್ತು ತೋಟಗಾರಿಕೆ ಕಚೇರಿಗಳನ್ನು ನೂತನ ಜಿಲ್ಲಾಡಳಿತ ಭವನಕ್ಕೆ ಸ್ಥಳಾಂತರಿಸಲಾಗುವುದು ಎಂದರು

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H